ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 239 RNI Number : KNKAN/25/A2770 10-09-2026 Thursday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :239 ರಾಯಚೂರು 10-09-2026 ಗುರುವಾರ ಪುಟ 04 ಬೆಲೆ ರೂ.2/- ಮೊ:8660146563

ಗಣೇಶೋತ್ಸವ: ನಿಯಮ ಪಾಲನೆ, ಸುರಕ್ಷತೆಗೆ ಜಿಲ್ಲಾಧಿಕಾರಿ ಸೂಚನೆ



ರಾಯಚೂರು,ಸೆ.09-

ಗಣೇಶೋತ್ಸವದ ಪೂರ್ವಸಿದ್ಧತೆ, ಗಣೇಶ ಮೂರ್ತಿ ಪ್ರತಿಷ್ಠಾಪನೆಗೆ ಅನುಮತಿ ಪ್ರಕ್ರಿಯೆ ಹಾಗೂ ಸುರಕ್ಷತಾ ವ್ಯವಸ್ಥೆಗಳ ಕುರಿತು ಜಿಲ್ಲಾಧಿಕಾರಿ ಶ್ರೀಮತಿ ಪೂವಿತಾ ಎಸ್. ಅವರ ಅಧ್ಯಕ್ಷತೆಯಲ್ಲಿ ಮಹಾನಗರ ಪಾಲಿಕೆ ಸಭಾಂಗಣದಲ್ಲಿ ಸಭೆ ನಡೆಯಿತು.

ಮಹಾನಗರ ಪಾಲಿಕೆ ಆಯುಕ್ತ ಜುಬಿನ್ ಮೋಹಪಾತ್ರ, ಹಾಗೂ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಶು ಗಿರಿ ಉಪಸ್ಥಿತರಿದ್ದರು.

ಗಣೇಶ ಮೂರ್ತಿ ಪ್ರತಿಷ್ಠಾಪನೆಗೆ ಅನುಮತಿ ನೀಡುವಾಗ ಸರ್ಕಾರದ ಮಾರ್ಗಸೂಚಿ ಹಾಗೂ ನಿಗದಿತ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಪ್ರತಿಯೊಂದು ಪ್ರಸ್ತಾವಿತ ಸ್ಥಳವನ್ನು ಕಡ್ಡಾಯವಾಗಿ ಪರಿಶೀಲಿಸಿ, ಸಾರ್ವಜನಿಕ ಸುರಕ್ಷತೆ ಮತ್ತು ಸಂಚಾರ ವ್ಯವಸ್ಥೆಗೆ ಯಾವುದೇ ತೊಂದರೆಯಾಗದಿರುವುದನ್ನು ಖಚಿತಪಡಿಸಿಕೊಂಡ ಬಳಿಕವೇ ನಿಯಮಾನುಸಾರ

3 ನೇ ಪುಟಕ್ಕೆ

ಸತೀಶ್ ಜಾರಕಿಹೊಳಿ ನಿವಾಸಗಳ ಮೇಲೆ ಇ.ಡಿ. ದಾಳಿ: ಕಾಂಗ್ರೆಸ್ ನಾಯಕರಿಂದ ಖಂಡನೆ

ಬೆಂಗಳೂರು,ಸೆ..09- ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರಿಗೆ ಸಂಬಂಧಿಸಿದ ಮನೆಗಳ ಮೇಲೆ ಜಾರಿ ನಿರ್ದೇಶನಾಲಯ () ಬುಧವಾರ ಬೆಳಗ್ಗೆ ದಾಳಿ ಮಾಡಿದ್ದು, ಪರಿಶೀಲನೆ ನಡೆಸುತ್ತಿದೆ. ವಿದೇಶಿ ವಿನಿಮಯ ನಿರ್ವಹಣಾ ಕಾಯ್ದೆ () ಉಲ್ಲಂಘಿಸಿದ ಆರೋಪದಡಿ ಇ.ಡಿ ದಾಳಿ ಮಾಡಿದೆ. ಬೆಂಗಳೂರಿನ 6 ಕಡೆ ಸೇರಿದಂತೆ ರಾಜ್ಯದ 18 ಕಡೆಗಳಲ್ಲಿ ದಾಳಿ ನಡೆಸಿದೆ. ಈ ದಾಳಿಯನ್ನು ರಾಜ್ಯ ಕಾಂಗ್ರೆಸ್ ನಾಯಕರು ಖಂಡಿಸಿದ್ದಾರೆ. ಕಾಂಗ್ರೆಸ್‌ನವರು ಮಾತ್ರ ನಿಯಮ ಉಲ್ಲಂಘಿಸಿದ್ದಾರೆಯೇ? ಬಿಜೆಪಿಯವರು ನಿಯಮ ಪಾಲನೆ ಮಾಡಿದ್ದಾರೆಯೇ? ಎಂದು ಪ್ರಶ್ನಿಸಿದ್ದಾರೆ. ಈ ಬಗ್ಗೆ ವಿಧಾನಸೌಧದಲ್ಲಿ ಮಾತನಾಡಿದ ಕಾರ್ಮಿಕ ಸಚಿವ ಸಂತೋಷ್ ಲಾಡ್, ಸತೀಶ್ ಜಾರಕಿಹೊಳಿ ಅವರು ವಿದೇಶದಲ್ಲಿ ಹಣ ಹೂಡಿಕೆ ಮಾಡಿರುವ ಬಗ್ಗೆ ಮಾಹಿತಿಯಿಲ್ಲ. ಆದರೆ, ಇ.ಡಿ ದಾಳಿ ನಮಗೇನು ಹೊಸದಲ್ಲ. ನಾವೆಲ್ಲ ಜಾರಕಿಹೊಳಿ ಅವರ ಜೊತೆಯಲ್ಲಿದ್ದೇವೆ. ಜನರೂ ಕೂಡ ಅವರ ಜೊತೆಗಿದ್ದಾರೆ. ಇ.ಡಿಗೆ ದಾಳಿ ಮಾಡುವ ಅಧಿಕಾರವಿದೆ. ಆದರೆ, ಕಾಂಗ್ರೆಸ್ ಪಕ್ಷದ ನಾಯಕರ ಮೇಲಷ್ಟೇ ಇಡಿ ದಾಳಿ ಆಗ್ತಿದೆ. ಹಾಗೇ ಬಿಜೆಪಿಗರ ಮೇಲೆ ದಾಳಿ ಆಗಲ್ಲ, ಯಾಕೆ? ಎಂದು ಪ್ರಶ್ನಿಸಿದರು. ಡಿಕೆಶಿ ಸರ್ಕಾರಕ್ಕೆ ನೂರು ದಿನ ಸಂಬಂಧ ಪ್ರತಿಕ್ರಿಯಿಸಿದ ಅವರು, ನಾಳೆಗೆ ನೂರು ದಿನ ಆಗುತ್ತಿದೆ, ಸಮಾರಂಭವಿದೆ. ಈ ಬಗ್ಗೆ ಹೊಸ ಯೋಜನೆಗಳನ್ನು ಸಿಎಂ ಘೋಷಿಸಲಿದ್ದಾರೆ. ರಾಜ್ಯದಲ್ಲಿ ಕೋಟ್ಯಂತರ ತೇಗದ ಮರ ನೆಡುವ ಘೋಷಣೆ ಮಾಡಲಿದ್ದಾರೆ. ರೈತರಿಗೆ ಟ್ರ್ಯಾಕ್ಟರ್ ಮೇಲೆ ಸಬ್ಸಿಡಿ ನೀಡಲಿದ್ದಾರೆ ಎಂದು ಮಾಹಿತಿ ನೀಡಿದರು.

ಗಣೇಶೋತ್ಸವ: ರಾಯಚೂರಿನಲ್ಲಿ ಪೊಲೀಸ್ ಕಟ್ಟೆಚ್ಚರ!

2,570 ಮೂರ್ತಿಗಳ ಪ್ರತಿಷ್ಠಾಪನೆ; 1,454 ರೌಡಿಗಳ ಮೇಲೆ ಕಣ್ಗಾವಲು 23 ಮಂದಿ ಗಡಿಪಾರಿಗೆ ಕಾನೂನುಬಾಹಿರ ಚಟುವಟಿಕೆಗೆ ಬ್ರೇಕ್



ರಾಯಚೂರು,ಸೆ.09-

ಜಿಲ್ಲೆಯಲ್ಲಿ ಸೆ.14ರಂದು ಗಣೇಶ ಚತುರ್ಥಿ ಆಚರಿಸಲಾಗುತ್ತಿದ್ದು, ಶಾಂತಿ ಮತ್ತು ಕಾನೂನು ಸುವ್ಯವಸ್ಥೆ ಕಾಪಾಡಲು ಜಿಲ್ಲಾ ಪೊಲೀಸರು ಬಿಗಿ ಬಂದೋಬಸ್ತ್ ಕೈಗೊಂಡಿದ್ದಾರೆ. ಜಿಲ್ಲೆಯಾದ್ಯಂತ ಒಟ್ಟು 2,570 ಗಣೇಶ ಮೂರ್ತಿಗಳು ಪ್ರತಿಷ್ಠಾಪನೆಗೊಳ್ಳಲಿದ್ದು, ಗಣೇಶ ಮಂಡಳಿಗಳಿಂದ ಮುಚ್ಚಳಿಕೆ ಪತ್ರ ಪಡೆಯಲಾಗಿದೆ. ವಿವಿಧ ಸಮುದಾಯಗಳ ಮುಖಂಡರು ಹಾಗೂ ಅಧಿಕಾರಿಗಳೊಂದಿಗೆ ಶಾಂತಿ ಸಭೆಗಳನ್ನು ನಡೆಸಲಾಗಿದೆ.

ಜಿಲ್ಲೆಯಲ್ಲಿ ಪ್ರಚಲಿತದಲ್ಲಿರುವ 1,557 ರೌಡಿ ಆಸಾಮಿಗಳ ಪೈಕಿ 1,454 ಮಂದಿಯ ವಿರುದ್ಧ ಮುಂಜಾಗ್ರತಾ ಕ್ರಮ ಕೈಗೊಳ್ಳಲಾಗಿದೆ. ಇವರಲ್ಲಿ 1,124 ಮಂದಿಯಿಂದ ಮುಚ್ಚಳಿಕೆ ಪತ್ರ ಪಡೆಯಲಾಗಿದ್ದು, 23 ಮಂದಿಯ ವಿರುದ್ಧ ಗಡಿಪಾರಿಗೆ ಕ್ರಮ ಜರುಗಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ಪ್ರಕಟಣೆ ತಿಳಿಸಿದೆ.

ಗಣೇಶೋತ್ಸವದ ಭದ್ರತೆಗಾಗಿ ಪೊಲೀಸ್ ಸಿಬ್ಬಂದಿ, ಗೃಹರಕ್ಷಕದಳ, ಸಶಸ್ತ್ರ ಮೀಸಲು ಪಡೆ, ಕೆಎಸ್‌ಆರ್‌ಪಿ ಸೇರಿದಂತೆ ವಿವಿಧ ಪಡೆಗಳನ್ನು ನಿಯೋಜಿಸಲಾಗಿದೆ. ಹಬ್ಬದ ನೆಪದಲ್ಲಿ ಮಾದಕ ವಸ್ತು ಸೇವನೆ, ಬೈಕ್ ವೀಲಿಂಗ್, ಮಹಿಳೆಯರು, ಮಕ್ಕಳು ಹಾಗೂ ವೃದ್ಧರಿಗೆ ಕಿರಿಕಿರಿ ಉಂಟುಮಾಡುವುದು ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಕಾನೂನುಬಾಹಿರ ಚಟುವಟಿಕೆ ನಡೆಸುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದಾಗಿ ಪೊಲೀಸರು ಎಚ್ಚರಿಸಿದ್ದಾರೆ.

ಗಣೇಶ ಮಂಟಪ ನಿರ್ಮಾಣ, ವಿದ್ಯುತ್ ಸಂಪರ್ಕ, ಧ್ವನಿವರ್ಧಕ ಹಾಗೂ ಮೆರವಣಿಗೆಗೆ ಸಂಬಂಧಿಸಿದಂತೆ ಕಡ್ಡಾಯವಾಗಿ

3 ನೇ ಪುಟಕ್ಕೆ

50 ದಿನಗಳಿಂದ ಕಾಲುವೆಗೆ ನೀರಿಲ್ಲ: ಪ್ರತಿ ಎಕರೆಗೆ ₹25 ಸಾವಿರ ಪರಿಹಾರಕ್ಕೆ ನರಸಿಂಹ ಆಗ್ರಹ

ರಾಯಚೂರು,ಸೆ.09-

ಜಿಲ್ಲೆಯಲ್ಲಿ ಬರದ ಸಂಕಷ್ಟದಿಂದ ರೈತರು ತೀವ್ರ ತೊಂದರೆ ಅನುಭವಿಸುತ್ತಿದ್ದು, ಬೆಳೆ ನಷ್ಟಕ್ಕೆ ಸೂಕ್ತ ಪರಿಹಾರ ಹಾಗೂ ನೀರಾವರಿ ವ್ಯವಸ್ಥೆ ಕಲ್ಪಿಸುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಸಿರು ಸೇನೆ (ವಾಸುದೇವ ಮೇಟಿ ಬಣ) ವತಿಯಿಂದ ಸೆ.15ರಂದು ಜಿಲ್ಲಾಧಿಕಾರಿ ಕಚೇರಿ ಎದುರು ಬೃಹತ್ ಪ್ರತಿಭಟನೆ ನಡೆಸಲಾಗುವುದು ಎಂದು ಜಿಲ್ಲಾಧ್ಯಕ್ಷ ನರಸಿಂಹ ನಾಯಕ ಕಾಗ್ಗೆಲ್ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಬರಗಾಲ ಘೋಷಣೆಯಾಗಿದ್ದರೂ



ಪರಿಹಾರ ಕ್ರಮಗಳು ವಿಳಂಬವಾಗುತ್ತಿವೆ. ಮಳೆಯಾಶ್ರಿತ ಬೆಳೆಗಳು ಸಂಪೂರ್ಣ ನಾಶವಾಗಿದ್ದು, ನೀರಾವರಿ ಪ್ರದೇಶಗಳಲ್ಲಿಯೂ ನೀರಿನ ಕೊರತೆಯಿಂದ ಬೆಳೆಗಳು ಅರೆಜೀವ ಸ್ಥಿತಿಯಲ್ಲಿವೆ ಎಂದು ಆರೋಪಿಸಿದರು.

ತುಂಗಭದ್ರ ಎಡದಂಡೆ ಕಾಲುವೆಯ ಡಿಸ್ಟ್ರಿಬ್ಯೂಟರ್ ಸಂಖ್ಯೆ 102, 102ಎ ಹಾಗೂ 103ಕ್ಕೆ 50 ದಿನಗಳಿಂದ ನೀರು ಹರಿಯದಿರುವುದು ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಸಾಕ್ಷಿಯಾಗಿದೆ ಎಂದು ದೂರಿದರು.

ಬರದಿಂದ ಹಾನಿಗೊಳಗಾದ ರೈತರಿಗೆ ಪ್ರತಿ ಎಕರೆಗೆ ₹25 ಸಾವಿರ ಪರಿಹಾರ ನೀಡಬೇಕು. ಕಾಲುವೆಯ ಕೊನೆಯ ಭಾಗದವರೆಗೂ ಗೇಜ್ ಪ್ರಕಾರ ನೀರು ಹರಿಸಿ ಕೆರೆಗಳನ್ನು ತುಂಬಿಸಬೇಕು. ಚಂದ್ರಬಂಡಾ ಹೋಬಳಿಯ ಕೆರೆಗಳನ್ನು ಕೃಷ್ಣಾ ನದಿಯಿಂದ ಏತ ನೀರಾವರಿ ಮೂಲಕ ತುಂಬಿಸಬೇಕು ಎಂದು ಆಗ್ರಹಿಸಿದರು.

ಭೂ ನ್ಯಾಯ ಮಂಡಳಿಗಳಿಗೆ ಚಾಲನೆ ನೀಡಿ ರೈತ ಸಾಗುವಳಿ

3 ನೇ ಪುಟಕ್ಕೆ

ದುಡಿಯುವ ವರ್ಗ -ದಮನಿತ ಸಮುದಾಯಗಳ ಹೋರಾಟಕ್ಕೆ ಬಲ

ಸೆ.16ರಿಂದ ರಾಯಚೂರಿನಲ್ಲಿ ರೆಡ್‌ಸ್ಟಾರ್ ರಾಷ್ಟ್ರೀಯ ಮಹಾ ಅಧಿವೇಶನ

ರಾಯಚೂರು,ಸೆ.09-

ದುಡಿಯುವ ವರ್ಗ ಹಾಗೂ ದಮನಿತ ಸಮುದಾಯಗಳ ಹಕ್ಕುಗಳ ರಕ್ಷಣೆಗಾಗಿ ಹೋರಾಟಗಳನ್ನು ಬಲಪಡಿಸುವ ಉದ್ದೇಶದಿಂದ ಸಿಪಿಐ(ಎಂಎಲ್) ರೆಡ್‌ಸ್ಟಾರ್ ಪಕ್ಷದ 13ನೇ ರಾಷ್ಟ್ರೀಯ ಕಮ್ಯುನಿಸ್ಟ್ ಮಹಾ ಅಧಿವೇಶನ ಸೆ.16ರಿಂದ 20ರವರೆಗೆ ರಾಯಚೂರಿನಲ್ಲಿ ನಡೆಯಲಿದೆ ಎಂದು ಸ್ವಾಗತ ಸಮಿತಿಯ ಮುಖ್ಯ ಸಂಯೋಜಕ ಆರ್. ಮಾನಸಯ್ಯ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದೇಶದಲ್ಲಿ ಹೆಚ್ಚುತ್ತಿರುವ ಕಾರ್ಪೊರೇಟ್ ಬಂಡವಾಳಶಾಹಿ, ಜಾತಿ ತಾರತಮ್ಯ, ಧಾರ್ಮಿಕ ಅಸಮಾನತೆ ಹಾಗೂ ಪ್ರಜಾ



ಪ್ರಭುತ್ವದ ಮೇಲಿನ ದಾಳಿಗಳ ಕುರಿತು ಮಹಾ ಅಧಿವೇಶನದಲ್ಲಿ ಚರ್ಚಿಸಿ, ಮುಂದಿನ ಹೋರಾಟಗಳ ರೂಪುರೇಷೆಗಳನ್ನು ನಿರ್ಧರಿಸಲಾಗುವುದು ಎಂದರು.

ಸೆ.16ರಂದು ಬೆಳಿಗ್ಗೆ 10.30ಕ್ಕೆ ಪಂಡಿತ್ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದ ಚಾರು ಮಜುಂದಾರ್ ಸಭಾಂಗಣದಲ್ಲಿ ಉದ್ಘಾಟನಾ ಸಮಾರಂಭ ನಡೆಯಲಿದ್ದು, ಪಕ್ಷದ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಹಾಗೂ ಮಾರ್ಕ್ಸ್‌ವಾದಿ ಅರ್ಥಶಾಸ್ತ್ರಜ್ಞ ಪಿ.ಜೆ. ಜೇಮ್ಸ್ ಉದ್ಘಾಟಿಸಲಿದ್ದಾರೆ. 14 ರಾಜ್ಯಗಳ ರಾಜ್ಯ ಕಾರ್ಯದರ್ಶಿಗಳು ಹಾಗೂ ಸುಮಾರು 300 ಚುನಾಯಿತ ಪ್ರತಿನಿಧಿಗಳು ಭಾಗವಹಿಸಲಿದ್ದಾರೆ. ಶ್ರೀಲಂಕಾ, ಬಾಂಗ್ಲಾದೇಶ, ನೇಪಾಳ, ಕೀನ್ಯಾ ಸೇರಿದಂತೆ ವಿವಿಧ ದೇಶಗಳ ಕ್ರಾಂತಿಕಾರಿ ಕಮ್ಯುನಿಸ್ಟ್ ಪಕ್ಷಗಳ ಮುಖಂಡರು ಪಾಲ್ಗೊಳ್ಳಲಿದ್ದಾರೆ.

ಸೆ.18ರಂದು ಆರ್‌ಎಸ್‌ಎಸ್

3 ನೇ ಪುಟಕ್ಕೆ

ಮೋದಿ ಸಾರ್ವಜನಿಕ ಜೀವನಕ್ಕೆ 25ರ ಸಂಭ್ರಮ


ಪ್ರಧಾನಿ ಹುಟ್ಟುಹಬ್ಬದ ದಿನದಿಂದ ಒಂದು ತಿಂಗಳ ಕಾಲ 'ಸೇವಾ ಸಂಕಲ್ಪ ಅಭಿಯಾನ'ಕ್ಕೆ ಬಿಜೆಪಿ ಸಿದ್ಧತೆ

ನವದೆಹಲಿ,ಸೆ.09-

ಪ್ರಧಾನಿ ನರೇಂದ್ರ ಮೋದಿ ಸಾರ್ವಜನಿಕ ಜೀವನಕ್ಕೆ ಬಂದು 25 ವರ್ಷ ಕಳೆದಿದ್ದು, ಅವರ ಆಡಳಿತ ಸಾಧನೆಯನ್ನು ಜನರಿಗೆ ಬಿಂಬಿಸುವ ಉದ್ದೇಶದಿಂದ ಸೆಪ್ಟೆಂಬರ್ 17ರಂದು ಅವರ ಹುಟ್ಟುಹಬ್ಬದಿಂದ ಒಂದು ತಿಂಗಳ ಕಾಲ 'ಸೇವಾ ಸಂಕಲ್ಪ ಅಭಿಯಾನ' ನಡೆಸಲು ಉದ್ದೇಶಿಸಿರುವುದಾಗಿ ಬಿಜೆಪಿ ಘೋಷಿಸಿದೆ.

ಪಕ್ಷದ ಕಚೇರಿಯಲ್ಲಿ ನಡೆದ ಮಾಧ್ಯಮಗೋಷ್ಟಿಯನ್ನುದ್ದೇಶಿಸಿ ಮಾತನಾಡಿದ ಬಿಜೆಪಿ ಅಧ್ಯಕ್ಷ ನಿತಿನ್ ನಬಿನ್, ಮೋದಿಯವರ ಜನ್ಮದಿನವನ್ನು ಸೇವಾ ದಿವಸವನ್ನಾಗಿ ಆಚರಿಸಲಾಗುವುದು.

ಅವರ ಸೇವೆ ಮತ್ತು ಸಮರ್ಪಣೆಯ ಪಯಣ ಹಾಗೂ ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಅಭಿವೃದ್ಧಿ ಮತ್ತು ಕಲ್ಯಾಣ ಯೋಜನೆಗಳನ್ನು ತಲುಪಿಸುವ ಗುರಿಯನ್ನು ಹೊಂದಲಾಗಿದೆ. ಈ ಅವರ ಪ್ರಯತ್ನಗಳನ್ನು ಜನರಿಗೆ ಪರಿಚಯಿಸಲು ಸೆಪ್ಟಂಬರ್ 17 ರಿಂದ ಅಕ್ಟೋಬರ್ 17 ರವರೆಗೆ ವಿವಿಧ



ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು ಎಂದರು.

ಸಾರ್ವಜನಿಕ ಜೀವನಕ್ಕೆ ಮೋದಿ ಆಗಮಿಸಿ 25 ವರ್ಷಗಳ ಅವರ ಆಡಳಿತ ಅವಧಿಯಲ್ಲಿ ಜನರ ಜೀವನದಲ್ಲಿ ಉಂಟಾದ ಬದಲಾವಣೆಗಳನ್ನು ಈ ಅಭಿಯಾನವು ಎತ್ತಿ ತೋರಿಸಲಿದೆ ಎಂದರು.

ಮುಂಬರುವ ಅಕ್ಟೋಬರ್ 7ಕ್ಕೆ ಪ್ರಧಾನಿ ನರೇಂದ್ರ ಮೋದಿ ಅವರು ಸಾರ್ವಜನಿಕ ಸೇವೆಯಲ್ಲಿ 25 ವರ್ಷಗಳನ್ನು ಪೂರೈಸಲಿದ್ದಾರೆ. 2001ರ ಅಕ್ಟೋಬರ್ 7ರಂದು ಗುಜರಾತ್‌ನ ಮುಖ್ಯಮಂತ್ರಿಯಾಗಿ ಅವರು ಅಧಿಕಾರ ವಹಿಸಿಕೊಳ್ಳುವುದರೊಂದಿಗೆ ಈ ಪ್ರಯಾಣ ಆರಂಭವಾಗಿತ್ತು. ಕಳೆದ 25 ವರ್ಷಗಳಲ್ಲಿ, ಸಾರ್ವಜನಿಕ ಸೇವೆಯಿಂದ ರಾಷ್ಟ್ರ ಸೇವೆಗೆ ಎಂಬ ಮಂತ್ರವನ್ನು ಅಳವಡಿಸಿಕೊಂಡು ಅವರು ಈ ಸೇವಾ ಪಯಣವನ್ನು ದೃಢವಾಗಿ ಮುಂದುವರಿಸಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ದೇಶದ ನಾಯಕತ್ವ ವಹಿಸಿಕೊಂಡಾಗ, ಭಾರತವು ನೀತಿ ಪಾರ್ಶ್ವವಾಯು ಎದುರಿಸುತ್ತಿತ್ತು. ಐದು ದುರ್ಬಲ ಆರ್ಥಿಕತೆಗಳಲ್ಲಿ ಒಂದೆಂದು ಕರೆಯಲಾಗುತ್ತಿತ್ತು.

ಇಂದು, ಭಾರತವು ವಿಶ್ವದಲ್ಲೇ ವೇಗವಾಗಿ ಬೆಳೆಯುತ್ತಿರುವ ಪ್ರಮುಖ ಆರ್ಥಿಕತೆಯಾಗಿದೆ.

ಸಾಮಾನ್ಯ ಪಕ್ಷದ ಕಾರ್ಯಕರ್ತನಿಂದ ದೇಶದ ಪ್ರಧಾನ ಸೇವಕವರೆಗಿನ ಪ್ರಧಾನಿ ಮೋದಿಯವರ ಪ್ರಯಾಣದಲ್ಲಿ ಅವರ ದೃಷ್ಟಿಕೋನ, ಸಂಕಲ್ಪ ಮತ್ತು ನಿರಂತರ ಪ್ರಯತ್ನಗಳು ಈ ಪರಿವರ್ತನೆಗೆ ಕಾರಣವಾಗಿವೆ ಎಂದು ತಿಳಿಸಿದರು.

ಒಂದು ತಿಂಗಳ ಸೇವಾ ಸಂಕಲ್ಪ ಅಭಿಯಾನವೂ ಸೆಪ್ಟಂಬರ್ 17 ರಂದು ಪ್ರಾರಂಭವಾಗಿ ಅಕ್ಟೋಬರ್ 17 ರವರೆಗೆ ಮುಂದುವರಿಯಲಿವೆ. ಪ್ರಧಾನಿ ಮೋದಿ ಹುಟ್ಟುಹಬ್ಬವನ್ನು ಸೇವಾ ದಿವಸವನ್ನಾಗಿ ಆಚರಿಸುತ್ತದೆ. ರಕ್ತದಾನ ಶಿಬಿರ ನಡೆಸಲಾಗುವುದು. ಹಾಗೆ ಆ ದಿನದಂದು ಆಶೀರ್ವಾದ್ ಕಾ ದಿಯಾ ಕಾರ್ಯಕ್ರಮವನ್ನು ಆಯೋಜಿಸುತ್ತಿದ್ದೇವೆ. ಅಲ್ಲದೆ, ಪ್ರತಿ ವರ್ಷದಂತೆ ಅಕ್ಟೋಬರ್ 2 ರಂದು ಸ್ವಚ್ಛತಾ ಅಭಿಯಾನವನ್ನು ಹಮ್ಮಿಕೊಳ್ಳುತ್ತೇವೆ ಎಂದು ನಿಬಿನ್ ತಿಳಿಸಿದರು.

ರಾಜಕೀಯ ಮುಸುಕಿನ ಗುದ್ದಾಟದಲ್ಲಿ ಜಿಲ್ಲೆಯ ದಕ್ಷ ಅಧಿಕಾರಿಗಳಿಗೆ ಬರೆ

ಪಾಲಿಕೆಯ ಆಯುಕ್ತ ಜುಬೀನ್ ಮೊಹಪಾತ್ರ ಅವರ ವರ್ಗಾವಣೆಗೆ ವಿರೋಧ

ರಾಯಚೂರು,ಸೆ.09-

ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರ ಧಿಡೀರ್ ಯಾದಗಿರಿ ಜಿಲ್ಲೆಗೆ ಜಿ.ಪಂ ಸಿಇಒ ಆಗಿ ವರ್ಗಾವಣೆ ಜಿಲ್ಲೆಯ ಸಾರ್ವಜನಿಕರ, ಸಂಘ ಸಂಸ್ಥೆಗಳ ಅಸಮಾಧಾನಕ್ಕೆ ಕಾರಣವಾಗಿದೆ. ಜೊತೆಗೆ ಜಿಲ್ಲೆಯ ರಾಜಕೀಯ ನಾಯಕರ ಮುಸುಕಿನ ಗುದ್ದಾದಲ್ಲಿ ದಕ್ಷ ಅಧಿಕಾರಿಗಳಿಗೆ ಬರೆ ಎಳೆಯಲಾಗುತ್ತಿದೆ ಎಂಬ ಆರೋಪ ಕೇಳಿಬಂದಿದೆ

ರಾಯಚೂರು ಜಿಲ್ಲೆಗೆ ಅಧಿಕಾರಿಗಳು ಅನ್ಯ ಜಿಲ್ಲೆಯಿಂದ ವರ್ಗವಾಗಿ ಬಂದಾಗ ಇಲ್ಲಿನ ಸ್ಥಿತಿಗತಿ, ಜಡ್ಡುಗಟ್ಟಿದ ಆಡಳಿತ ವ್ಯವಸ್ಥೆ ಕಂಡು ಹೀಯಾಳಿಸುವುದೇ ಹೆಚ್ಚು ಇದರ ಮಧ್ಯೆ ಮಹಾನಗರ ಪಾಲಿಕೆಯ ಆಯುಕ್ತರಾಗಿ ಆಗಮಿಸಿದ್ದ ಐಎಎಸ್ ಅಧಿಕಾರಿ ಜುಬಿನ್ ಮೊಹಪಾತ್ರ ಅವರು ಭಿನ್ನರಾಗಿದ್ದು, ಕೆಲಸ ಮಾಡಲು ಅನೇಕ ಸಮಸ್ಯೆಗಳಿವೆ, ಅಡ್ಡಿ ಆತಂಕಗಳನ್ನು ಮೆಟ್ಟಿ ತಾವು ಆಲೋಚಿಸಿದ ಯೋಜನೆಗಳನ್ನು ಪೂರ್ಣಗೊಳಿಸಲು ಶಕ್ತಿಮೀರಿ ಪ್ರಯತ್ನ ಮಾಡಿದ್ದು ಕಾಣಬಹುದು.

ಅನೇಕ ಅಧಿಕಾರಿಗಳು ವರ್ಗವಾಗಿ ಬಂದಾಗ ರಾಯಚೂರು ನಗರವನ್ನು ಅತ್ಯಂತ ಕೊಳಕು ನಗರ, ಕಸದ ತೊಟ್ಟಿ ಎಂಬೆಲ್ಲಾ ಹೀಯಾಳಿಸಿದ್ದು ಉಂಟು, ಆದರೆ ಜುಬಿನ್ ಮೊಹಪಾತ್ರ ಅವರು ಕೇವಲ ಭಾಷಣ, ಭರವಸೆಗಳನ್ನು ನೀಡದೇ ರಾಯಚೂರನ್ನು ಸ್ವಚ್ಛ ಹಸಿರು ನಗರ ನಿರ್ಮಾಣಕ್ಕೆ ಕೆಲಸ ಮಾಡಿದ್ದಾರೆ ಇನ್ನು ಜಾರಿಯಲ್ಲಿದೆ, ಬಿಸಿಲುನಾಡು ರಾಯಚೂರನ್ನು ಕೂಲ್ ರಾಯಚೂರು



ಮಾಡಲು ಪ್ರಮುಖ ರಸ್ತೆಗಳ ಮಧ್ಯೆ ಡಿವೈಡರ್, ಕೆರೆ ಜಾಗ ಸೇರಿದಂತೆ ಪ್ರಮುಖ ಬಡಾವಣೆ ಗಳಲ್ಲಿ 5 ಲಕ್ಷ ಗಿಡಗಳನ್ನು ಹಾಕುವ ಯೋಜನೆ ಕೈಗೊಂಡಿದ್ದು ಈಗಾಗಲೇ ಹಲವೆಡೆ ಕಾಮಗಾರಿ ಪ್ರಗತಿಯಲ್ಲಿದೆ. ಹೊರವಲಯದ ಯಕ್ಲಾಸಪೂರು ಬಡಾವಣೆಯಲ್ಲಿ ಘನತ್ಯಾಜ್ಯ ನಿರ್ವಹಣೆ ಘಟಕದಲ್ಲಿ ಬೆಟ್ಟದೆತ್ತರದ ಕಸದ ಗುಡ್ಡೆಗಳನ್ನು ತೆರವು ಮಾಡಿದ್ದಾರೆ. ಪಾಲಿಕೆಯ ಸಿಬ್ಬಂದಿಗೆ ತರಬೇತಿ, ಸಮವಸ್ತ್ರ ವಿತರಣೆ, ವೈಯಕ್ತಿಕ ಸೌಲಭ್ಯ ನೀಡಿ

3 ನೇ ಪುಟಕ್ಕೆ

ಸಾಕಷ್ಟು ಅಭಿವೃದ್ಧಿ ಕಾರ್ಯಗಳನ್ನು ಮಾಡಿರುವ ಪಾಲಿಕೆಯ ಆಯುಕ್ತ ಜುಬೀನ್ ಮೊಹಪಾತ್ರ ಅವರ ವರ್ಗಾವಣೆ ಯಾವುದೇ ಕಾರಣಕ್ಕೆ ಮಾಡಬಾರದು, ಇನ್ನಷ್ಟು ದಿನ ಇಲ್ಲಿಯೇ ಇರಬೇಕು ಇಲ್ಲಿದಿದ್ದರೆ ಹೋರಾಟ ಮಾಡುತ್ತೇವೆ. ರಾಜ್ಯ ಸಂಘಟನಾ ಸಂಚಾಲಕರು ಕ. ದ. ಸಘರ್ಷ ರಾಯಚೂರು ಪಾಲಿಕೆಯ ಆದಾಯ ಸೋರಿಕೆಗೆ ಕಡಿವಾಣ ಹಾಕಿದಾಗಲೇ ವರ್ಗಾವಣೆ? ಮಹಾನಗರ ಪಾಲಿಕೆಗೆ ಆದಾಯಕ್ಕೆ ಮೂಲವಾದ ಆಸ್ತಿ ತೆರಿಗೆ, ನಳದ ಕರ ಪಾವತಿ, ಮಳಿಗೆಗಳ ಬಾಡಿಗೆ ಸೇರಿದಂತೆ ಆದಾಯಕ್ಕೆ ಮೂಲವಾಗಿದೆ. ಆದರೆ ದರ ಪರಿಷ್ಕರಣೆ ಹಾಗೂ ಬಾಕಿ ಇರುವ ಕರ ಪಾವತಿಗೆ ಗಂಭೀರ ಚಿಂತನೆ ನಡೆಸಿ ಒಂದು ತಂಡ ರಚನೆ ಮಾಡಿದ್ದರು. ಆದರೆ ಎಸ್ ಐ ಆರ್ ಕಾರ್ಯ ಆರಂಭವಾಗಿದ್ದರಿಂದ ತಾತ್ಕಾಲಿಕವಾಗಿ ನನೆಗುದಿಗೆ ಬಿದ್ದಿದೆ ಎನ್ನಲಾಗಿದೆ. ಆಸ್ತಿ ತರಿಗೆ, ಕರ ಪಾವತಿ, ವಾಣಿಜ್ಯ ಮಳಿಗೆಗೆಗಳ ದರ ಪರಿಷ್ಕರಣೆ, ಮಧ್ಯವರ್ತಿಗಳ ಹಾವಳಿ ತಡೆಗಟ್ಟಿ ಆದಾಯದ ಮೂಲಗಳನ್ನು ಗಟ್ಟಿಗೊಳಿಸಿದ ಪರಿಣಾಮವೇ ಕೆಲ ಪ್ರಭಾವಿ ಉದ್ಯಮಿಗಳು, ದೊಡ್ಡ ವ್ಯಾಪಾರಸ್ಥರ ಒಂದು ಗುಂಪು, ರಾಜಕೀಯ ನಾಯಕರು ಇದನ್ನು ಸಹಿಸದೇ ವರ್ಗಾವಣೆಗೆ ಶಕ್ತಿ ಪ್ರದರ್ಶನ ಮಾಡಿದ್ದಾರೆ ಎಂಬ ಆರೋಪಗಳು ಕೇಳಿಬಂದಿವೆ.

ಎಸ್‌ಐಆರ್ ಜಾಗೃತಿಗೆ ಆರೋಗ್ಯ ಇಲಾಖೆ ಜಾಥಾ



ರಾಯಚೂರು,ಸೆ.09-

ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಸ್ವೀಪ್ ಸಮಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ತಾಲೂಕು ಆರೋಗ್ಯಾಧಿಕಾರಿಗಳ ಕಚೇರಿ ಸಹಯೋಗದಲ್ಲಿ ಬುಧವಾರ ಜಾಗೃತಿ ಜಾಥಾ ನಡೆಸಲಾಯಿತು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಕಚೇರಿ ಆವರಣದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ನಂದಿತಾ ಎಂ.ಎನ್. ಹಾಗೂ ತಾಲೂಕು ಆರೋಗ್ಯಾಧಿಕಾರಿ ಡಾ. ಸತೀಶ್ ಅವರು ಹಸಿರು ನಿಶಾನೆ ತೋರಿಸುವ ಮೂಲಕ ಜಾಥಾಕ್ಕೆ ಚಾಲನೆ ನೀಡಿದರು.

ಈ ವೇಳೆ ಮಾತನಾಡಿದ ಅಧಿಕಾರಿಗಳು, 18 ವರ್ಷ

3 ನೇ ಪುಟಕ್ಕೆ

371(ಜೆ) ವಿಶೇಷ ಸ್ಥಾನಮಾನ ಉಳಿಸಿಕೊಳ್ಳಲು ನಿರಂತರ ಹೋರಾಟ ಅಗತ್ಯ: ಡಾ.ರಝಾಕ್ ಉಸ್ತಾದ್



ಕಲಬುರಗಿ,ಸೆ.09-

ಕಲ್ಯಾಣ ಕರ್ನಾಟಕಕ್ಕೆ ದೊರೆತಿರುವ ಸಂವಿಧಾನದ 371(ಜೆ) ವಿಶೇಷ ಸ್ಥಾನಮಾನವನ್ನು ಉಳಿಸಿಕೊಳ್ಳಲು ನಿರಂತರ ಜಾಗೃತಿ ಮತ್ತು ಹೋರಾಟ ಅಗತ್ಯವಾಗಿದೆ. ಹಕ್ಕುಗಳನ್ನು ಉಳಿಸಿಕೊಳ್ಳದಿದ್ದರೆ ಅವುಗಳನ್ನು ಕಸಿದುಕೊಳ್ಳಲು ಮುಂದಾಗುವವರ ಸಂಖ್ಯೆ ಹೆಚ್ಚಾಗುತ್ತದೆ ಎಂದು ಹೋರಾಟಗಾರ ಹಾಗೂ ಚಿಂತಕ ಡಾ. ರಝಾಕ್ ಉಸ್ತಾದ್ ಹೇಳಿದರು.

ನಗರದ ಸರ್ಕಾರಿ ಮಹಾ ವಿದ್ಯಾಲಯ (ಸ್ವಾಯತ್ತ), ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಹೋರಾಟ ಸಮಿತಿ ಹಾಗೂ ಪ್ರಜ್ಞಾ ಕಾನೂನು ಸಲಹಾ ಸಮಿತಿ ಆಶ್ರಯದಲ್ಲಿ ಮಂಗಳವಾರ ನಡೆದ ಕಲಂ 371(ಜೆ) ದಶಮಾನದ ಅವಲೋಕನ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

371(ಜೆ) ವ್ಯಾಪ್ತಿಗೆ ವಿಜಯಪುರ, ಗದಗ ಹಾಗೂ ಚಿತ್ರದುರ್ಗ ಜಿಲ್ಲೆಗಳನ್ನು ಸೇರಿಸಬೇಕೆಂಬ ಬೇಡಿಕೆಗಳು ಕೇಳಿಬರುತ್ತಿರುವ ಹಿನ್ನೆಲೆಯಲ್ಲಿ, ಈಗಿರುವ ವಿಶೇಷ ಸ್ಥಾನಮಾನದ ಸಮರ್ಪಕ ಅನುಷ್ಠಾನಕ್ಕೆ ಈ ಭಾಗದ ಜನರು ಎಚ್ಚರಿಕೆಯಿಂದ ಇರಬೇಕು ಎಂದು ಹೇಳಿದರು.

371(ಜೆ)ಯ ಇತಿಹಾಸ, ಮುಲ್ಕಿ ಕಾನೂನು ಹಾಗೂ ಹೈದರಾಬಾದ್ ಕರ್ನಾಟಕದ ಹೋರಾಟದ ಹಿನ್ನೆಲೆಯನ್ನು ಶಿಕ್ಷಣ ಪಠ್ಯಕ್ರಮದಲ್ಲಿ ಸೇರಿಸಬೇಕು. ಉದ್ಯೋಗ ಮತ್ತು ಶಿಕ್ಷಣದಲ್ಲಿ ಸ್ಥಳೀಯರಿಗೆ ದೊರೆತಿರುವ ಮೀಸಲಾತಿಯ ಸಂಪೂರ್ಣ ಪ್ರಯೋಜನವನ್ನು ವಿದ್ಯಾರ್ಥಿಗಳು ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಕಳೆದ ಒಂದೂವರೆ ದಶಕದಲ್ಲಿ ಕಲ್ಯಾಣ ಕರ್ನಾಟಕದಲ್ಲಿ 1,16,816 ಹುದ್ದೆಗಳು ಮಂಜೂರಾಗಿದ್ದು, 79,370 ಹುದ್ದೆಗಳು ಮಾತ್ರ ಭರ್ತಿಯಾಗಿವೆ. ಸಾವಿರಾರು ಹುದ್ದೆಗಳು ಇನ್ನೂ ಖಾಲಿ ಉಳಿದಿದ್ದು, ಮೀಸಲಾತಿಯಡಿ ಭರ್ತಿಯಾಗಬೇಕಿದ್ದ ಹುದ್ದೆಗಳೂ ಪೂರ್ಣಗೊಂಡಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

2014ರಿಂದ ಈವರೆಗೆ ಕಲ್ಯಾಣ ಕರ್ನಾಟಕ ಅಭಿವೃದ್ಧಿಗಾಗಿ ಸರ್ಕಾರ ಸುಮಾರು 29,480 ಕೋಟಿ ರೂ. ಅನುದಾನ ನೀಡಿದ್ದರೂ, ಅದರಲ್ಲೂ ಸುಮಾರು 16 ಸಾವಿರ ರೂ. ಕೋಟಿ ಮಾತ್ರ ವೆಚ್ಚವಾಗಿದೆ. ಬಿಡುಗಡೆಯಾದ ಅನುದಾನ ಸಮರ್ಪಕವಾಗಿ ಬಳಕೆಯಾಗದಿರುವುದರಿಂದ ಪ್ರದೇಶದ ಅಭಿವೃದ್ಧಿಯಲ್ಲಿ ನಿರೀಕ್ಷಿತ ಬದಲಾವಣೆ ಕಂಡುಬಂದಿಲ್ಲ ಎಂದು ಹೇಳಿದರು.

ಅಭಿವೃದ್ಧಿ ಎಂದರೆ ಅನುದಾನ ಮಾತ್ರವಲ್ಲ: ಉದ್ಘಾಟನಾ ಸಮಾರಂಭದಲ್ಲಿ ಹೋರಾಟಗಾರ್ತಿ ಕೆ.ನೀಲಾ ಪ್ರಾಸ್ತಾವಿಕವಾಗಿ ಮಾತನಾಡಿ, ಅಭಿವೃದ್ಧಿ ಎಂದರೆ ರಸ್ತೆ, ಕಟ್ಟಡ ಹಾಗೂ ಅನುದಾನ ಮಾತ್ರವಲ್ಲ; ಶಿಕ್ಷಣ, ಆರೋಗ್ಯ, ಪೌಷ್ಟಿಕತೆ ಮತ್ತು ಸ್ವಾಭಿಮಾನದ ಬದುಕು ದೊರೆಯುವುದೇ ನಿಜವಾದ ಅಭಿವೃದ್ಧಿ ಎಂದು ಹೇಳಿದರು.

ಕಲ್ಯಾಣ ಕರ್ನಾಟಕದ ಸಾವಿರಾರು ಶಾಲೆಗಳು ಶಿಥಿಲಾವಸ್ಥೆಯಲ್ಲಿದ್ದು, ಹೆಣ್ಣು ಮಕ್ಕಳಿಗೆ ಶೌಚಾಲಯಗಳ ಕೊರತೆ, ಮಕ್ಕಳಲ್ಲಿ ಅಪೌಷ್ಟಿಕತೆ ಮತ್ತು ಮೂಲಸೌಕರ್ಯಗಳ ಅಭಾವ ಇನ್ನೂ ಮುಂದುವರಿದಿದೆ ಎಂದು ಅವರು ಕಳವಳ ವ್ಯಕ್ತಪಡಿಸಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಕಲ್ಯಾಣ ಕರ್ನಾಟಕ ಹೋರಾಟ ಸಮಿತಿಯ ಸಂಸ್ಥಾಪಕ ಅಧ್ಯಕ್ಷ ಲಕ್ಷ್ಮಣ ದಸ್ತಿ, 371(ಜೆ) ವಿಶೇಷ ಸ್ಥಾನಮಾನಕ್ಕಾಗಿ ನಡೆದ ಹೋರಾಟದ ಇತಿಹಾಸವನ್ನು ಸ್ಮರಿಸಿ, ಕಲಬುರಗಿಯನ್ನು ರಾಜ್ಯದ ಉಪರಾಜಧಾನಿಯನ್ನಾಗಿ ಘೋಷಿಸಬೇಕು ಹಾಗೂ ಕಲ್ಯಾಣ ಕರ್ನಾಟಕದ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಂಡುಕೊಳ್ಳಲು ಸರ್ಕಾರ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಒತ್ತಾಯಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸರ್ಕಾರಿ ಮಹಾವಿದ್ಯಾಲಯದ (ಸ್ವಾಯತ್ತ) ಪ್ರಾಂಶುಪಾಲರಾದ ಇಂದುಮತಿ ಪಾಟೀಲ ವಹಿಸಿದ್ದರು. ಸಾಮಾಜಿಕ ಚಿಂತಕಿ ಮೀನಾಕ್ಷಿ ಬಾಳಿ, ಶಿವಶರಣಪ್ಪ ಮೂಳೆಗಾಂವ, ವಿದ್ಯಾರ್ಥಿ ಕಲ್ಯಾಣಾಧಿಕಾರಿ ಶ್ರೀಮಂತ ಹೋಳ್ಕರ್ ಪ್ರಾಧ್ಯಾಪಕಿ ರಬಿಯಾ, ನಾಗಪ್ಪ ಗೋಗಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ದೃಢಸಂಕಲ್ಪದಿಂದಲೇ ಮದ್ಯವ್ಯಸನದಿಂದ ಸಂಪೂರ್ಣ ಮುಕ್ತಿ ಸಾಧ್ಯ: ಶರಣಪ್ಪ ಸಲಾದಪುರ



ಕಲಬುರಗಿ,ಸೆ.08-

ಮದ್ಯವ್ಯಸನದಿಂದ ಮುಕ್ತರಾಗಲು ಮನ ಪರಿವರ್ತನೆಯ ಜೊತೆಗೆ ದೃಢಸಂಕಲ್ಪ ಅತ್ಯಗತ್ಯ. ಶಿಬಿರದಲ್ಲಿ ಪಡೆದ ಅರಿವು ಮತ್ತು ಮಾರ್ಗದರ್ಶನವನ್ನು ಜೀವನದಲ್ಲಿ ಅಳವಡಿಸಿಕೊಂಡರೆ ಮದ್ಯಪಾನವನ್ನು ಸಂಪೂರ್ಣವಾಗಿ ತ್ಯಜಿಸಲು ಸಾಧ್ಯವಾಗುತ್ತದೆ ಎಂದು ಶರಣಪ್ಪ ಸಲಾದಪುರ ಹೇಳಿದರು.

ಕಮಲಾಪುರ ತಾಲೂಕಿನಲ್ಲಿ ಆಯೋಜಿಸಲಾಗಿದ್ದ 2113ನೇ ಮದ್ಯವರ್ಜನ ಶಿಬಿರದ ಸಮಾರೋಪ ಸಮಾರಂಭದಲ್ಲಿ ನವಜೀವನ ಸಮಿತಿ ಸದಸ್ಯರಿಗೆ ದಾಖಲಾತಿಗಳನ್ನು ಹಸ್ತಾಂತರಿಸಿ ಅವರು ಮಾತನಾಡಿದರು.

ಮದ್ಯವ್ಯಸನಿಗಳು ಮದ್ಯಪಾನವನ್ನು ಸಂಪೂರ್ಣವಾಗಿ ತ್ಯಜಿಸಿ, ಮದ್ಯಮುಕ್ತರಾಗಿ ನೆಮ್ಮದಿಯ ಬದುಕು ಸಾಗಿಸಬೇಕು ಎಂದು ಶುಭ ಹಾರೈಸಿದ ಅವರು, ಎಂಟು ದಿನಗಳ ಶಿಬಿರದಲ್ಲಿ ಪಡೆದ ಮನ ಪರಿವರ್ತನೆ, ಮಾರ್ಗದರ್ಶನ ಮತ್ತು ಆತ್ಮವಿಶ್ವಾಸವನ್ನು ಜೀವನದಲ್ಲಿ ಅಳವಡಿಸಿಕೊಂಡು ಹೊಸ ಜೀವನದತ್ತ ಹೆಜ್ಜೆ ಇಡಬೇಕು ಎಂದು ಶಿಬಿರಾರ್ಥಿಗಳಿಗೆ ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಜಯಶ್ರೀ ಮತ್ತಿಮೂಡ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು. ಯೋಜನೆಯ ನಿರ್ದೇಶಕರಾದ ಗಣಪತಿ ಮಾಳಜಿ, ಸಿ.ಎಸ್. ಬಾಬಾಳಗಾಂವ, ಅನಿಲಕುಮಾರ್ ಡಾಗೆ, ರವಿಕುಮಾರ್ ನಿಲೂರ, ಅಣ್ಣಪ್ಪ ಜಮಾದಾರ, ದಾಸಿಮಯ್ಯ ವಡ್ಡನಕೇರಿ,

ಶಿವಕುಮಾರ್ ಮರತೂರ, ಶಿವರುದ್ರಪ್ಪ ಮಾಟೂರ, ರಮೇಶ ಕೋರಿ, ಸಾಬಯ್ಯಾ ರತ್ನಾಕರ, ವಿರೇಶ್ ಜಮಾದಾರ, ಚಂದ್ರಕಾಂತ್ ಜಮಾದಾರ, ರವೀಂದ್ರ ಬಿ.ಕೆ., ಚಂದ್ರಕಾಂತ್, ಸೂರ್ಯಕಾಂತ್ ಸೇರಿದಂತೆ ಶಿಬಿರಾಧಿಕಾರಿಗಳು, ಆರೋಗ್ಯ ಸಹಾಯಕರು, ಮೇಲ್ವಿಚಾರಕರಾದ ಜ್ಞಾನಪ್ಪ ಕಂಬಳಿ, ಸೇವಾ ಪ್ರತಿನಿಧಿಗಳು, ನವಜೀವನ ಸಮಿತಿ ಸದಸ್ಯರು ಹಾಗೂ ಒಕ್ಕೂಟದ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಖ್ಯಾತ ಮೂಳೆ ಶಸ್ತ್ರಚಿಕಿತ್ಸಕ ಡಾ.ಸಚಿನ್ ಅವಿನಾಶ್ ಶಹಾ ಅವರಿಗೆ ವಿದ್ಯಾರತ್ನ ಪ್ರಶಸ್ತಿ ಪ್ರದಾನ



ಕಲಬುರಗಿ,ಸೆ.09-

ಶಿಕ್ಷಕರ ದಿನಾಚರಣೆಯ ಅಂಗವಾಗಿ ಕರ್ನಾಟಕ ಆರ್ಥೋಪೆಡಿಕ್ ಅಸೋಸಿಯೇಷನ್ ವತಿಯಿಂದ ಖ್ಯಾತ ಮೂಳೆ ಶಸ್ತ್ರಚಿಕಿತ್ಸಕ, ಪ್ರಾಧ್ಯಾಪಕ ಹಾಗೂ ಶಿಕ್ಷಣತಜ್ಞ ಡಾ. ಸಚಿನ್ ಅವಿನಾಶ್ ಶಹಾ ಅವರಿಗೆ ಪ್ರತಿಷ್ಠಿತ ವಿದ್ಯಾರತ್ನ ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಯಿತು.

ಸೆಪ್ಟೆಂಬರ್ 5ರಂದು ಕೊಡಗಿನಲ್ಲಿ ನಡೆದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ವೈದ್ಯಕೀಯ ಶಿಕ್ಷಣ, ಮಾರ್ಗದರ್ಶನ ಹಾಗೂ ಮೂಳೆ ಶಸ್ತ್ರಚಿಕಿತ್ಸೆ ಕ್ಷೇತ್ರಕ್ಕೆ ಸಲ್ಲಿಸಿರುವ ವಿಶಿಷ್ಟ ಸೇವೆಯನ್ನು ಗುರುತಿಸಿ ಈ ಪ್ರಶಸ್ತಿ ನೀಡಲಾಯಿತು.

ವೈದ್ಯ, ಸಂಶೋಧಕ ಮತ್ತು ಶಿಕ್ಷಣತಜ್ಞರಾಗಿ ಡಾ. ಸಚಿನ್ ಶಹಾ ಅವರು ಆಘಾತ ಚಿಕಿತ್ಸಾ ವಿಭಾಗ ಹಾಗೂ ಮೂಳೆ ಶಸ್ತ್ರಚಿಕಿತ್ಸೆಗೆ ಸಂಬಂಧಿಸಿದ ಹಲವು ಸಂಶೋಧನಾ ಲೇಖನಗಳನ್ನು ಪ್ರಕಟಿಸುವ ಮೂಲಕ ವೈದ್ಯಕೀಯ ಕ್ಷೇತ್ರಕ್ಕೆ ಗಮನಾರ್ಹ ಕೊಡುಗೆ ನೀಡಿದ್ದಾರೆ. ನಿರಂತರ ವೈದ್ಯಕೀಯ ಶಿಕ್ಷಣ ಕಾರ್ಯಕ್ರಮಗಳು, ಕಾರ್ಯಾಗಾರಗಳು ಮತ್ತು ಅತಿಥಿ ಉಪನ್ಯಾಸಗಳ ಮೂಲಕ ಯುವ ವೈದ್ಯರಿಗೆ ಮಾರ್ಗದರ್ಶನ ನೀಡುತ್ತಿದ್ದಾರೆ.

ಅಸ್ಥಿಸಂಧಿವಾತ, ಆರೋಗ್ಯಕರ ವೃದ್ಧಾಪ್ಯ ಹಾಗೂ ರಸ್ತೆ ಸುರಕ್ಷತೆ ಕುರಿತು ಜಾಗೃತಿ ಮೂಡಿಸುವ ಕೆಲಸದಲ್ಲಿಯೂ ಅವರು ಸಕ್ರಿಯರಾಗಿದ್ದಾರೆ. ಜ್ಞಾನವನ್ನು ವಿದ್ಯಾರ್ಥಿಗಳಿಗೆ ಹಂಚಿ ಉತ್ತಮ ವೃತ್ತಿಪರರನ್ನು ರೂಪಿಸುವ ಅವರ ಸಮರ್ಪಣೆ ಅನೇಕ ಯುವ ಶಸ್ತ್ರಚಿಕಿತ್ಸಕರಿಗೆ ಸ್ಫೂರ್ತಿಯಾಗಿದೆ ಎಂದು ಸಂಘದ ಪದಾಧಿಕಾರಿಗಳು ಮೆಚ್ಚುಗೆ ವ್ಯಕ್ತಪಡಿಸಿದರು.

ಕರ್ನಾಟಕ ಆರ್ಥೋಪೆಡಿಕ್ ಅಸೋಸಿಯೇಷನ್ ಅಧ್ಯಕ್ಷ ಡಾ. ಬಿ. ಸಚ್ಚಿದಾನಂದ ರಾಯ್, ಡಾ. ಭಾರತ್ ರಾಜು ಜೆ., ಡಾ. ಹರೀಶ್ ಮೂರ್ತಿ ಸೇರಿದಂತೆ ಹಲವು ಗಣ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಹುಮನಾಬಾದ್ ನಗರಾಭಿವೃದ್ಧಿಗೆ 6.73 ಕೋಟಿ ರೂ. ಅನುದಾನದ ವಿವಿಧ ಕಾಮಗಾರಿಗಳಿಗೆ ಚಾಲನೆ



ಹುಮನಾಬಾದ್,ಸೆ.09-

ನಗರದ ಸಮಗ್ರ ಅಭಿವೃದ್ಧಿಗೆ 6.73 ಕೋಟಿ ರೂ. ವೆಚ್ಚದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕ ಡಾ. ಸಿದ್ದು ಪಾಟೀಲ್ ಹಾಗೂ ವಿಧಾನ ಪರಿಷತ್ ಸದಸ್ಯ ಡಾ. ಚಂದ್ರಶೇಖರ್ ಪಾಟೀಲ್ ಮಂಗಳವಾರ ಶಂಕುಸ್ಥಾಪನೆ ನೆರವೇರಿಸಿದರು. ಕಾರ್ಯಕ್ರಮದ ವೇಳೆ ಇಬ್ಬರು ಜನಪ್ರತಿನಿಧಿಗಳ ನಡುವೆ ಮಾತಿನ ಚಕಮಕಿ ನಡೆದ ಘಟನೆ ಗಮನ ಸೆಳೆಯಿತು.

ನಗರದ ವಿವಿಧ ವಾರ್ಡ್‌ಗಳಲ್ಲಿ ಸಿಸಿ ರಸ್ತೆ, ಚರಂಡಿ, ರಾಷ್ಟ್ರಧ್ವಜ ಸ್ತಂಭ ನಿರ್ಮಾಣ, ಪ್ರಮುಖ ವೃತ್ತಗಳ ಸಂಪರ್ಕ ರಸ್ತೆಗಳ ಅಭಿವೃದ್ಧಿ ಹಾಗೂ ರಸ್ತೆ ವಿಭಾಜಕಗಳಲ್ಲಿ ವಿದ್ಯುತ್ ದೀಪ ಅಳವಡಿಕೆ ಸೇರಿದಂತೆ ಹಲವು ಕಾಮಗಾರಿಗಳಿಗೆ ಚಾಲನೆ ನೀಡಲಾಯಿತು.

ಡಾ. ಅಂಬೇಡ್ಕರ್ ವೃತ್ತದಿಂದ ಸರದಾರ ಪಟೇಲ್ ವೃತ್ತ, ಬಾಲಾಜಿ ದೇವಸ್ಥಾನ, ವೀರಭದ್ರೇಶ್ವರ ದೇವಸ್ಥಾನ, ಬಸವೇಶ್ವರ ವೃತ್ತ, ಶಿವಾಜಿ ವೃತ್ತದಿಂದ ಶಿವಪುರದ ಸಾಯಿ ಥಿಯೇಟರ್ ವರೆಗೆ ಹಾಗೂ ಕಲಬುರಗಿ ರಸ್ತೆಯಿಂದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ವರೆಗೆ ರಸ್ತೆ ನಿರ್ಮಾಣ ಕಾಮಗಾರಿಗಳಿಗೆ ಶಂಕುಸ್ಥಾಪನೆ ಮಾಡಲಾಯಿತು. ಎಸ್‌ಬಿಐ ಬ್ಯಾಂಕ್‌ನಿಂದ ಬಾಬು ಜಗಜೀವನ್ ವೃತ್ತದವರೆಗೆ ರಸ್ತೆ ವಿಭಾಜಕದಲ್ಲಿ ವಿದ್ಯುತ್ ದೀಪ ಅಳವಡಿಸುವ ಕಾಮಗಾರಿಗೂ ಚಾಲನೆ ನೀಡಲಾಯಿತು.

ಕಾರ್ಯಕ್ರಮದ ವೇಳೆ ಶಾಸಕರು ತಡವಾಗಿ ಆಗಮಿಸಿದ್ದಕ್ಕೆ ಎಂಎಲ್ಸಿ ಡಾ. ಚಂದ್ರಶೇಖರ್ ಪಾಟೀಲ್ ಆಕ್ಷೇಪ ವ್ಯಕ್ತಪಡಿಸಿದರು. ''ನಾವು ತಡವಾದರೆ ನೀವು ಕಾರ್ಯಕ್ರಮ ಮುಗಿಸಿ ಹೋಗುತ್ತೀರಿ. ನಿಮಗೆ ನಾವು ಕಾಯಬೇಕೇ?'' ಎಂದು ಪ್ರಶ್ನಿಸಿದಾಗ, ಶಾಸಕ ಸಿದ್ದು ಪಾಟೀಲ್ ''ನಾನು ಅಧ್ಯಕ್ಷನಾಗಿದ್ದೇನೆ, ನೀವು ಕಾಯಬೇಕು'' ಎಂದು ಪ್ರತಿಕ್ರಿಯಿಸಿದರು. ಇದರಿಂದ ಕೆಲಕಾಲ ಇಬ್ಬರ ನಡುವೆ ಏರುಧ್ವನಿಯಲ್ಲಿ ವಾಗ್ವಾದ ನಡೆಯಿತು.

ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಶಾಸಕ ಸಿದ್ದು ಪಾಟೀಲ್, ''ಪಟ್ಟಣದ ಅಭಿವೃದ್ಧಿಗೆ 10 ಕೋಟಿ ರೂ. ಗೂ ಹೆಚ್ಚು ಅನುದಾನ ತಂದು ಕೆಲಸ ಮಾಡುತ್ತಿದ್ದೇನೆ. ನನ್ನ ಅಭಿವೃದ್ಧಿ ಕಾರ್ಯ ಸಹಿಸದವರು ಅನಗತ್ಯ ವಿವಾದ ಸೃಷ್ಟಿಸುತ್ತಿದ್ದಾರೆ'' ಎಂದು ಆರೋಪಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಎಂಎಲ್ಸಿ ಡಾ. ಚಂದ್ರಶೇಖರ್ ಪಾಟೀಲ್, ''ಜನಪ್ರತಿನಿಧಿಗಳು ಸಾರ್ವಜನಿಕರನ್ನು ಬಿಸಿಲಿನಲ್ಲಿ ಕಾಯಿಸುವುದು ಸರಿಯಲ್ಲ. ಕೋಟ್ಯಂತರ ರೂ. ವೆಚ್ಚದ ಕಾರ್ಯಕ್ರಮಕ್ಕೆ ಶಾಮಿಯಾನ ವ್ಯವಸ್ಥೆಯನ್ನೂ ಮಾಡಿಲ್ಲ'' ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಸಿಎಂ ಪರಿಹಾರ ನಿಧಿ ಹಾಗೂ ಕೆಕೆಆರ್‌ಡಿಬಿ ಕಾಮಗಾರಿಗಳು ಕೆಲವೇ ಗುತ್ತಿಗೆದಾರರ ನಡುವೆ ಹಂಚಿಕೆಯಾಗುತ್ತಿವೆ ಎಂದು ಆರೋಪಿಸಿದ ಅವರು, ಹುಮನಾಬಾದ್ ಕ್ಷೇತ್ರದಲ್ಲಿ ಕಾಮಗಾರಿಗಳು ಸಮಯಕ್ಕೆ ಪೂರ್ಣಗೊಳ್ಳುತ್ತಿಲ್ಲ. ಈ ಕುರಿತು ದಾಖಲೆಗಳೊಂದಿಗೆ ಶೀಘ್ರದಲ್ಲೇ ಬಹಿರಂಗಪಡಿಸುವುದಾಗಿ ಹೇಳಿದರು.

ಈ ಸಂದರ್ಭದಲ್ಲಿ ಸಂತೋಷ್ ಪಾಟೀಲ್, ಸುನಿಲ್ ಪಾಟೀಲ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಫ್ಸರ್ ಮೋಹಿಯುದ್ದಿನ್, ಬಿಜೆಪಿ ಮಂಡಲ ಅಧ್ಯಕ್ಷ ಅನಿಲ್ ಪಸಾರ್ಗಿ,ಶಿವರಾಜ್ ಚಿನಕೇರಿ, ಮಲ್ಲಿಕಾರ್ಜುನ್ ಸೀಗಿ, ಸೈಯದ್ ಯಾಸಿನ್ ಅಲಿ, ಉಮೇಶ್ ಜಮಗಿ ಹಾಗೂ ರವಿ ಹೊಸಳ್ಳಿ ಸೇರಿದಂತೆ ಕಾಂಗ್ರೆಸ್ ಮತ್ತು ಬಿಜೆಪಿ ಕಾರ್ಯಕರ್ತರು, ಮುಖಂಡರು, ಸಾರ್ವಜನಿಕರು ಉಪಸ್ಥಿತರಿದ್ದರು.

ಆಳಂದ ಪೊಲೀಸರ ಕಾರ್ಯಾಚರಣೆ : 5.44 ಲಕ್ಷ ರೂ. ಮೌಲ್ಯದ 12 ಬೈಕ್ ಜಪ್ತಿ, ಮೂವರ ಬಂಧನ



ಆಳಂದ,ಸೆ.09-

ಪಟ್ಟಣದಲ್ಲಿ ನಡೆದ ದ್ವಿಚಕ್ರ ವಾಹನ ಕಳ್ಳತನ ಪ್ರಕರಣವನ್ನು ಭೇದಿಸುವಲ್ಲಿ ಆಳಂದ ಪೊಲೀಸರು ಯಶಸ್ವಿಯಾಗಿದ್ದು, ಮೂವರು ಆರೋಪಿಗಳನ್ನು ಬಂಧಿಸಿ ವಿವಿಧೆಡೆ ಕಳ್ಳತನ ಮಾಡಲಾಗಿದ್ದ ಸುಮಾರು 5.44 ಲಕ್ಷ ರೂ. ಮೌಲ್ಯದ 12 ದ್ವಿಚಕ್ರ ವಾಹನಗಳನ್ನು ಜಪ್ತಿ ಮಾಡಿದ್ದಾರೆ.

ಆಳಂದ ಪಟ್ಟಣದ ರೇವಣಸಿದ್ದೇಶ್ವರ ಕಾಲೋನಿಯ ನಿವಾಸಿ ಹರೀಶ್ ಭಾಲಖೇಡ್ ಅವರ ಹೀರೋ ಹೊಂಡಾ ಮೋಟಾರ್ ಸೈಕಲ್‌ನ್ನು ಆಗಸ್ಟ್ 5ರಂದು ರಾತ್ರಿ ಮನೆ ಮುಂದೆ ನಿಲ್ಲಿಸಲಾಗಿತ್ತು. ಮರುದಿನ ಬೆಳಗಿನ ಜಾವ ವಾಹನ ಕಾಣೆಯಾಗಿದ್ದು, ಈ ಸಂಬಂಧ ಆಳಂದ ಪೊಲೀಸ್ ಠಾಣೆಯಲ್ಲಿ ಗುನ್ನೆ ನಂ.151/2026ರಡಿ ಭಾರತೀಯ ನ್ಯಾಯ ಸಂಹಿತೆ (ಬಿಎನ್‌ಎಸ್) ಕಲಂ 303(2) ಅಡಿಯಲ್ಲಿ ಪ್ರಕರಣ ದಾಖಲಾಗಿತ್ತು.

ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ ಕಲಬುರಗಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಡೂರು ಶ್ರೀನಿವಾಸಲು, ಹೆಚ್ಚುವರಿ ಎಸ್‌ಪಿ ಮಹೇಶ್ ಮೇಘಣ್ಣನವರ ಹಾಗೂ ಆಳಂದ ಉಪವಿಭಾಗದ ಡಿವೈಎಸ್‌ಪಿ ತಾಮರಾಯ ಪಾಟೀಲ ಅವರ ಮಾರ್ಗದರ್ಶನದಲ್ಲಿ, ಆಳಂದ ಪೊಲೀಸ್ ಠಾಣೆಯ ಪಿಐ ಶರಣಬಸಪ್ಪ ಕೋಡ್ಲಾ ನೇತೃತ್ವದಲ್ಲಿ ವಿಶೇಷ ತನಿಖಾ ತಂಡವನ್ನು ರಚಿಸಲಾಗಿತ್ತು.

ವಿಶೇಷ ತಂಡವು ಖಚಿತ ಮಾಹಿತಿ ಆಧರಿಸಿ ಆಗಸ್ಟ್ 20ರಂದು ಆಳಂದತಡಕಲ್ ರಸ್ತೆಯ ಧಬಧಬಿ ಬಳಿ ಉಮೇಶ್ ಸುಭಾಷ್ ಪಾತ್ರೆ (23) ಎಂಬಾತನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿತು. ವಿಚಾರಣೆ ವೇಳೆ ಆತ ತನ್ನ ಸಹಚರರಾದ ತೇಜಸ್ಸು ಪ್ರವೀಣ ಎಣ್ಣೆಗುರೆ ಹಾಗೂ ಅನಿಲ್ ಸಂಜೀವಕುಮಾರ ಕ್ಷೀರಸಾಗರ ಅವರೊಂದಿಗೆ ಸೇರಿ ದ್ವಿಚಕ್ರ ವಾಹನಗಳನ್ನು ಕಳ್ಳತನ ಮಾಡಿರುವುದಾಗಿ ಒಪ್ಪಿಕೊಂಡಿದ್ದಾನೆ.

ಪೊಲೀಸರ ವಿಚಾರಣೆಯಲ್ಲಿ ಆರೋಪಿಗಳು ಆಳಂದ ಪಟ್ಟಣದಲ್ಲಿ ಎರಡು ಬೈಕ್, ಕಲಬುರಗಿ ನಗರದ ವಿಶ್ವವಿದ್ಯಾಲಯ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಎರಡು ಬೈಕ್ ಹಾಗೂ ಮಹಾರಾಷ್ಟ್ರದ ಉಮರ್ಗಾ, ಮಾದನ ಹಿಪ್ಪರಗಾ, ಅಕ್ಕಲಕೋಟೆ ಸೇರಿದಂತೆ ವಿವಿಧೆಡೆ ಒಟ್ಟು ಎಂಟು ಬೈಕ್‌ಗಳನ್ನು ಕಳ್ಳತನ ಮಾಡಿರುವುದು ಬೆಳಕಿಗೆ ಬಂದಿದೆ.

ಆರೋಪಿಗಳಿಂದ ಒಟ್ಟು 12 ದ್ವಿಚಕ್ರ ವಾಹನಗಳನ್ನು ಪೊಲೀಸರು ಜಪ್ತಿ ಮಾಡಿಕೊಂಡಿದ್ದು, ಅವುಗಳ ಒಟ್ಟು ಮೌಲ್ಯ ಸುಮಾರು 5.44 ಲಕ್ಷ ರೂ. ಎಂದು ಪೊಲೀಸರು ತಿಳಿಸಿದ್ದಾರೆ.

ಆರೋಪಿಗಳು ಮದ್ಯಪಾನ ಹಾಗೂ ಸಿಗರೇಟ್‌ಗಾಗಿ ಹಣದ ಅಗತ್ಯವಿದ್ದ ಕಾರಣ ದ್ವಿಚಕ್ರ ವಾಹನ ಕಳ್ಳತನದ ಕೃತ್ಯಕ್ಕೆ ಇಳಿದಿರುವುದಾಗಿ ವಿಚಾರಣೆ ವೇಳೆ ಬಾಯ್ಬಿಟ್ಟಿದ್ದಾರೆ. ಈ ಹಿನ್ನೆಲೆಯಲ್ಲಿ ಪೊಲೀಸರು ಮತ್ತಷ್ಟು ವಿಚಾರಣೆ ನಡೆಸುತ್ತಿದ್ದು, ಇನ್ನೂ ಹೆಚ್ಚಿನ ಪ್ರಕರಣಗಳಲ್ಲಿ ಇವರ ಪಾತ್ರವಿದೆಯೇ ಎಂಬುದನ್ನು ಪರಿಶೀಲಿಸುತ್ತಿದ್ದಾರೆ.

ಈ ಕಾರ್ಯಾಚರಣೆಯಲ್ಲಿ ಪಿಎಸ್‌ಐ ಸಂಜೀವರಡ್ಡಿ, ಹೆಡ್ ಕಾನ್ಸ್‌ಟೇಬಲ್ ಮೈಹಿಬೂಬ ಶೇಖ್ ಹಾಗೂ ಪೊಲೀಸ್ ಸಿಬ್ಬಂದಿಗಳಾದ ಜಾಕೀರ, ಸಚಿನ್, ಸಿದ್ದರಾಮ, ಹಣಮಂತ, ಮೌಲಾಲಿ ಮತ್ತು ಮಹಾಂತೇಶ ಭಾಗವಹಿಸಿದ್ದರು.

ಪ್ರಕರಣವನ್ನು ಭೇದಿಸಿ ಕಳುವಾದ ವಾಹನಗಳನ್ನು ವಶಪಡಿಸಿಕೊಂಡ ವಿಶೇಷ ಪೊಲೀಸ್ ತಂಡದ ಕಾರ್ಯವನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಡೂರು ಶ್ರೀನಿವಾಸಲು ಅವರು ಪ್ರಶಂಸಿಸಿದ್ದಾರೆ. ಈ ಸಂದರ್ಭದಲ್ಲಿ ಹೆಚ್ಚುವರಿ ಎಸ್‌ಪಿ ಮಹೇಶ್ ಮೇಘಣ್ಣನವರ, ಡಿವೈಎಸ್‌ಪಿ ತಾಮರಾಯ ಪಾಟೀಲ, ಗ್ರಾಮೀಣ ಸಿಪಿಐ ಹಾಗೂ ಪಿಐ ಶರಣಬಸಪ್ಪ ಕೋಡ್ಲಾ ಸೇರಿದಂತೆ ಪೊಲೀಸ್ ಅಧಿಕಾರಿಗಳು ಉಪಸ್ಥಿತರಿದ್ದರು.

24 ತಿಂಗಳ ಬಾಕಿ ಬಿಲ್ ಪಾವತಿಗೆ ಆಗ್ರಹ: ಸೆ.25ರಿಂದ ಗ್ರಾಮ ಪಂಚಾಯಿತಿಗಳ ಮೋಟಾರ್ ದುರಸ್ತಿ ಸ್ಥಗಿತ ಎಚ್ಚರಿಕೆ



ಬೀದರ್,ಸೆ.09-

ಜಿಲ್ಲೆಯ ವಿವಿಧ ಗ್ರಾಮ ಪಂಚಾಯಿತಿಗಳಲ್ಲಿ ಮೋಟಾರ್ ದುರಸ್ತಿ ಕಾರ್ಯ ನಿರ್ವಹಿಸುತ್ತಿರುವ ಮೆಕ್ಯಾನಿಕರಿಗೆ ಸುಮಾರು 24 ತಿಂಗಳಿಂದ ಬಾಕಿ ಇರುವ ಕಾಮಗಾರಿ ಬಿಲ್‌ಗಳನ್ನು ಕೂಡಲೇ ಪಾವತಿಸಬೇಕು ಎಂದು ಅಮರೇಶ್ವರ್ ಮೋಟಾರ್ ಮೆಕ್ಯಾನಿಕ್ ಯೂನಿಯನ್ ಹಾಗೂ ಅಲ್ಲಮಪ್ರಭು ಮೋಟಾರ್ ರಿವೈಂಡಿಂಗ್ ಮೆಕ್ಯಾನಿಕ್ ಸಂಘ ಒತ್ತಾಯಿಸಿದೆ.

ಈ ಕುರಿತು ಮಂಗಳವಾರ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗೆ ಮನವಿ ಸಲ್ಲಿಸಿದ ಸಂಘದ ಪದಾಧಿಕಾರಿಗಳು, ಬೀದರ್ ಜಿಲ್ಲೆಯ ವಿವಿಧ ಗ್ರಾಮ ಪಂಚಾಯಿತಿಗಳ ಜತೆಗೆ ಔರಾದ್ (ಬಿ), ಕಮಲನಗರ್ ಮತ್ತು ಭಾಲ್ಕಿ ತಾಲೂಕುಗಳ ಗ್ರಾಮ ಪಂಚಾಯಿತಿಗಳಲ್ಲೂ ಮೆಕ್ಯಾನಿಕರು ನಿರಂತರವಾಗಿ ಮೋಟಾರ್ ದುರಸ್ತಿ ಕಾಮಗಾರಿ ನಡೆಸುತ್ತಿದ್ದಾರೆ. ಆದರೆ, ಕಾಮಗಾರಿ ಪೂರ್ಣಗೊಂಡು ಸುಮಾರು ಎರಡು ವರ್ಷ ಕಳೆದರೂ ಬಿಲ್ ಪಾವತಿಯಾಗಿಲ್ಲ ಎಂದು ಆರೋಪಿಸಿದರು.

ಮೆಕ್ಯಾನಿಕರು ತಮ್ಮ ಸ್ವಂತ ಹಣ ಹಾಗೂ ಖಾಸಗಿ ಸಾಲದ ನೆರವಿನಿಂದ ಕಾಮಗಾರಿಗಳನ್ನು ನಿರ್ವಹಿಸಿದ್ದು, ಬಾಕಿ ಹಣ ಸಿಗದ ಕಾರಣ ತೀವ್ರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ. ಬಿಲ್ ಕುರಿತು ಗ್ರಾಮ ಪಂಚಾಯಿತಿ ಅಧಿಕಾರಿಗಳನ್ನು ಪ್ರಶ್ನಿಸಿದಾಗ, 15ನೇ ಹಣಕಾಸು ಯೋಜನೆಯ ಅನುದಾನ ಬಂದ ಬಳಿಕ ಪಾವತಿ ಮಾಡಲಾಗುವುದು ಎಂದು ಹೇಳುತ್ತಿದ್ದು, ಇದುವರೆಗೆ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರು ಸೇರಿದಂತೆ ಅಗತ್ಯ ಸೇವೆಗಳಿಗೆ ಸಂಬಂಧಿಸಿದ ಮೋಟಾರ್‌ಗಳ ದುರಸ್ತಿ ಕಾರ್ಯಕ್ಕೆ ತೊಂದರೆಯಾಗದಂತೆ ಬಾಕಿ ಬಿಲ್‌ಗಳನ್ನು ತಕ್ಷಣ ಪಾವತಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಬೇಡಿಕೆ ಈಡೇರಿಸದಿದ್ದರೆ ಸೆಪ್ಟೆಂಬರ್ 25ರಿಂದ ಜಿಲ್ಲೆಯ ಗ್ರಾಮ ಪಂಚಾಯಿತಿಗಳಲ್ಲಿ ಮೋಟಾರ್ ದುರಸ್ತಿ ಕಾಮಗಾರಿಗಳನ್ನು ಸ್ಥಗಿತಗೊಳಿಸಿ ಹೋರಾಟ ನಡೆಸಲಾಗುವುದು ಎಂದು ಸಂಘಟನೆಗಳು ಎಚ್ಚರಿಕೆ ನೀಡಿವೆ.

ಈ ಸಂದರ್ಭದಲ್ಲಿ ಅಮರೇಶ್ವರ್ ಮೋಟಾರ್ ಮೆಕ್ಯಾನಿಕ್ ಯೂನಿಯನ್ ಅಧ್ಯಕ್ಷ ಬಾಜಿರಾವ್ ಜಾಧವ್, ಅಲ್ಲಮಪ್ರಭು ಮೋಟಾರ್ ರಿವೈಂಡಿಂಗ್ ಮೆಕ್ಯಾನಿಕ್ ಸಂಘದ ಅಧ್ಯಕ್ಷ ಸಂಜೀವಕುಮಾರ್, ಉಪಾಧ್ಯಕ್ಷ ಸೈಯದ್ ಹಸಿನುದ್ದಿನ್ ಉಡಾನ್ ಸೇರಿದಂತೆ ಇನ್ನಿತರ ಮೆಕ್ಯಾನಿಕ್‌ರು ಉಪಸ್ಥಿತರಿದ್ದರು.

ಒಂದನೇಯ ಪುಟದಿಂದ

ರಾಯಚೂರಿನಲ್ಲಿ ರೆಡ್‌ಸ್ಟಾರ್ ರಾಷ್ಟ್ರೀಯ ಮಹಾ ಅಧಿವೇಶನ

ಫ್ಯಾಸಿಸಂನ್ನು ಕಿತ್ತೆಸೆಯುವ ಕಾರ್ಯಭಾರಗಳು ಹಾಗೂ ಸೆ.19ರಂದು ಜಾತಿ ವಿನಾಶದ ಸವಾಲುಗಳು ಕುರಿತು ಅಖಿಲ ಭಾರತ ವಿಚಾರ ಸಂಕಿರಣಗಳು ನಡೆಯಲಿವೆ. ವಿಚಾರವಾದಿ ಪ್ರೊ. ಕೆ.ಎಸ್. ಭಗವಾನ್, ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾದ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಡಾ. ಎಸ್.ಕ್ಯೂ.ಆರ್. ಇಲಿಯಾಸ್ ಸೇರಿದಂತೆ ಹಿರಿಯ ನ್ಯಾಯವಾದಿಗಳು, ಧಾರ್ಮಿಕ ಮುಖಂಡರು, ಸಾಹಿತಿಗಳು ಹಾಗೂ ವಿವಿಧ ರಾಜ್ಯಗಳ ಮುಖಂಡರು ಭಾಗವಹಿಸಲಿದ್ದಾರೆ.

ಕಾರ್ಮಿಕರು, ರೈತರು, ದಲಿತರು, ಆದಿವಾಸಿಗಳು, ಮಹಿಳೆಯರು ಹಾಗೂ ಶೋಷಿತ ಸಮುದಾಯಗಳ ಹೋರಾಟಗಳನ್ನು ಬಲಪಡಿಸುವ ಕುರಿತು ಪ್ರತಿನಿಧಿ ಅಧಿವೇಶನದಲ್ಲಿ ಚರ್ಚೆ ನಡೆಯಲಿದೆ. ಮಹಾ ಅಧಿವೇಶನದ ಅಂಗವಾಗಿ ದಲಿತ ಕಲಾಮಂಡಳಿಗಳು ಹಾಗೂ ವಿವಿಧ ಜನಸಾಂಸ್ಕೃತಿಕ ತಂಡಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. ಸೆ.16ರಂದು ತತ್ವಪದ ಗಾಯಕ ಆಕಾಶ್ ಮನಗೂಳಿ ಅವರ ಗಾಯನ ಕಾರ್ಯಕ್ರಮ ಹಾಗೂ ಭಜನಾಬ್ರಹ್ಮ ದಾದಾಪೀರ್ ಮಂಜರ್ಲಾ ಪ್ರಶಸ್ತಿ ಪ್ರದಾನ ಸಮಾರಂಭ ನಡೆಯಲಿದೆ.

ರಾಯಚೂರು ಹಾಗೂ ಕಲ್ಯಾಣ ಕರ್ನಾಟಕದ ಜನಪರ ಹೋರಾಟಗಳ ಪರಂಪರೆಗೆ ಗೌರವ ಸಲ್ಲಿಸುವ ದೃಷ್ಟಿಯಿಂದ ಮಹಾ ಅಧಿವೇಶನ ಆಯೋಜಿಸಲಾಗಿದೆ. ಬಹಿರಂಗ ಕಾರ್ಯಕ್ರಮಗಳು ಹಾಗೂ ವಿಚಾರ ಸಂಕಿರಣಗಳಲ್ಲಿ ಪ್ರಗತಿಪರ, ಪ್ರಜಾಸತ್ತಾತ್ಮಕ ಹಾಗೂ ಜನಪರ ಶಕ್ತಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಮಾನಸಯ್ಯ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ರವೀಂದ್ರನಾಥ ಪಟ್ಟಿ, ಬಿ. ಬಸವರಾಜ್, ಎಂ. ನಿರಂಜನ್, ಜಿ. ಅಡವಿರಾವ್ ಹಾಗೂ ಎಂ. ಗಂಗಾಧರ್ ಉಪಸ್ಥಿತರಿದ್ದರು.

ನಿಯಮ ಪಾಲನೆ, ಸುರಕ್ಷತೆಗೆ ಜಿಲ್ಲಾಧಿಕಾರಿ ಸೂಚನೆ

ಅನುಮತಿ ನೀಡಬೇಕು ಎಂದು ಜಿಲ್ಲಾಧಿಕಾರಿ ಅಧಿಕಾರಿಗಳಿಗೆ ಸೂಚಿಸಿದರು.

ಬಳಿಕ ಜಿಲ್ಲಾಧಿಕಾರಿಗಳು ನಗರದ ವಿವಿಧ ಗಣೇಶ ಮೂರ್ತಿ ಪ್ರತಿಷ್ಠಾಪನಾ ಸ್ಥಳಗಳು ಹಾಗೂ ಮಾವಿನ ಕೆರೆ ಸೇರಿದಂತೆ ವಿಸರ್ಜನೆಗೆ ಗುರುತಿಸಲಾದ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಪ್ರತಿಷ್ಠಾಪನೆ ಮತ್ತು ವಿಸರ್ಜನಾ ಸ್ಥಳಗಳಲ್ಲಿ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು. ವಿದ್ಯುತ್ ಮಾರ್ಗ, ತಂತಿಗಳು, ಗಿಡ-ಮರಗಳು ಸೇರಿದಂತೆ ಸಂಭವನೀಯ ಅಪಾಯದ ಅಂಶಗಳನ್ನು ಗುರುತಿಸಿ, ಯಾವುದೇ ಅವಘಡ ಸಂಭವಿಸದಂತೆ ಕ್ರಮ ಕೈಗೊಳ್ಳುವಂತೆ ಜೆಸ್ಕಾಂ, ಅರಣ್ಯ ಇಲಾಖೆ ಸೇರಿದಂತೆ ಸಂಬಂಧಿತ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಕಾನೂನು ಮತ್ತು ಸುವ್ಯವಸ್ಥೆ, ಸಂಚಾರ ನಿರ್ವಹಣೆ, ವಿದ್ಯುತ್ ಸುರಕ್ಷತೆ ಹಾಗೂ ಪರಿಸರ ಸಂರಕ್ಷಣೆ ಸೇರಿದಂತೆ ಎಲ್ಲ ವಿಭಾಗಗಳ ನಡುವೆ ಸಮನ್ವಯ ಸಾಧಿಸಿ, ಅಗತ್ಯ ಪೂರ್ವಸಿದ್ಧತಾ ಕಾರ್ಯಗಳನ್ನು ಕಾಲಮಿತಿಯಲ್ಲಿ ಪೂರ್ಣಗೊಳಿಸುವಂತೆ ಸೂಚಿಸಿದರು. ಗಣೇಶೋತ್ಸ ವವನ್ನು ಶಾಂತಿಯುತ, ಸುವ್ಯವಸ್ಥಿತ ಹಾಗೂ ಸುರಕ್ಷಿತವಾಗಿ ಆಚರಿಸಲು ಜಿಲ್ಲಾಡಳಿತದಿಂದ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದರು.

ಪ್ರತಿ ಎಕರೆಗೆ ₹25 ಸಾವಿರ ಪರಿಹಾರಕ್ಕೆ ನರಸಿಂಹ ಆಗ್ರಹ

ದಾರರಿಗೆ ಭೂಮಿ ಮಂಜೂರು ಮಾಡಬೇಕು, ಜಾನುವಾರುಗಳಿಗೆ ಮೇವಿನ ಬ್ಯಾಂಕ್ ಆರಂಭಿಸಬೇಕು, ಗ್ರಾಮ ಪಂಚಾಯಿತಿ ಚುನಾವಣೆ ಗಳನ್ನು ತಕ್ಷಣ ನಡೆಸಬೇಕು, ಸರ್ಕಾರಿ ಶಾಲೆಗಳ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸಬೇಕು ಹಾಗೂ ಸಹಕಾರ ಇಲಾಖೆ ಉದ್ಯೋಗಗಳಲ್ಲಿ ಮಹಿಳೆಯರಿಗೆ ಸೂಕ್ತ ಮೀಸಲಾತಿ ನೀಡಬೇಕು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿದರು.

ಸರ್ಕಾರ ರೈತರ ಬೇಡಿಕೆಗಳಿಗೆ ಕೂಡಲೇ ಸ್ಪಂದಿಸದಿದ್ದರೆ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ನರಸಿಂಹ ನಾಯಕ ಕಾಗ್ಗಲ್ ಎಚ್ಚರಿಸಿದರು. ಸುದ್ದಿಗೋಷ್ಠಿಯಲ್ಲಿ ಮಲ್ಲನಗೌಡ, ಮಂಜುಳಾ, ಗೋವಿಂದ್ ನಾಯಕ್, ಜಂಗ್ಲಿಪೀರ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

ರಾಜಕೀಯ ಮುಸುಕಿನ ಗುದ್ದಾಟದಲ್ಲಿ ಜಿಲ್ಲೆಯ ದಕ್ಷ ಅಧಿಕಾರಿಗಳಿಗೆ ಬರೆ

ನೆರವಾಗಿದ್ದಾರೆ. ನಗರಸಭೆ ಆಡಳಿತವಿದ್ದಾಗ ಅವೈಜ್ಞಾನಿಕ ಕಾರ್ಯವಿಧಾನದಿಂದ ಸುತ್ತಮುತ್ತಲಿನ ಬಡಾವಣೆಗಳಲ್ಲಿ ಕಲುಷಿತ ಗಾಳಿ, ವಾಸನೆಯಿಂದ ಮೂಗು ಮುಚ್ಚಿಕೊಳ್ಳುವ ಪರಿಸ್ಥಿತಿ ಇತ್ತು ಜುಬೀನ್ ಅವರು ಬಂದ ನಂತರ ದೊಡ್ಡದಾದ ಮೂರು ಗುಂಡಿಗಳನ್ನು ನಿರ್ಮಿಸಿ ವೈಜ್ಞಾನಿಕವಾಗಿ ವಿಲೇವಾರಿ ಮಾಡಿದ್ದಾರೆ, ಗಬ್ಬು ನಾರುತ್ತದ್ದ ಘಟಕದಲ್ಲಿ ಸುಂದರವಾದ ಜಪಾನ್ ಮಾದರಿಯ ಮಿಯಾವಾಕಿ ಮಿನಿ ಫಾರೆಸ್ಟ್ ನಿರ್ಮಾಣ ಮಾಡುತ್ತಿದ್ದಾರೆ. ಘನತ್ಯಾಜ್ಯ ನಿರ್ವಹಣೆಗೆ, ರಾಜಕಾಲುವೆಗಳ ಹೂಳು ತೆಗೆಯಲು ಆಧುನಿಕ ಯಂತ್ರಗಳು, ಸಲಕರಣೆಗಳು, ಯುಜಿಡಿ ನಿರ್ವಹಣೆಗೆ ರೊಬೋಟ್ ತಂತ್ರಜ್ಞಾನ ಪರಿಚಯಿಸಿ ಅಳವಡಿಸಿಕೊಂಡಿದ್ದಾರೆ.

ಆರ್ ಆರ್ ಆರ್ : ನಗರದ ಅನೇಕ ಬಡಾವಣೆಗಳಲ್ಲಿ ಕಸವನ್ನು ಹಸಿ ಕಸ ಒಣಕಸವನ್ನಾಗಿ ವಿಭಾಗಿಸಿ ನೀಡುತ್ತಿರಲಿಲ್ಲ ಪಾಲಿಕೆಯ ವಾಹನಗಳಲ್ಲಿ ಜಾಗೃತಿ ಮೂಡಿಸಿದ್ದಾರೆ, ಅಷ್ಟೇ ಅಲ್ಲದೇ ದೇಶದ ದೊಡ್ಡ ದೊಡ್ಡ ನಗರಗಳಲ್ಲಿ ಸುಸ್ಥಿರ ಘನ-ತ್ಯಾಜ್ಯ ನಿರ್ವಹಣೆಯಲ್ಲಿ ಮಹತ್ವದ ಪಾತ್ರವನ್ನು ನಿಭಾಯಿಸುತ್ತಿರುವ ಆರ್‌ಆರ್‌ಆರ್ (ರೆಡ್ಯೂಸ್,ರೀ-ಯೂಸ್, ರೀ-ಸೈಕಲ್) ಸೆಂಟರ್‌ಗಳನ್ನು ರಾಯಚೂರು ನಗರದ ಹಲವೆಡೆ ಸ್ಥಾಪನೆ ಘನ-ತ್ಯಾಜ್ಯದ ಸಂಗ್ರಹದ ಪ್ರಮಾಣವನ್ನು ಕಡಿಮೆಗೊಳಿಸುವುದರ ಜೊತೆಗೆ ಅಗತ್ಯವಾದ ವಸ್ತುಗಳನ್ನು ಮರಳಿ ಬಳಕೆ ಮಾಡುವುದು ಹಾಗೂ ಪುನರ್‌ಉಪಯೋಗಿಸಿ ಕಸ ಮುಕ್ತ, ಸ್ವಚ್ಛ-ಸುಂದರ ಹಾಗೂ ಪರಿಸರ ಸ್ನೇಹಿ ನಗರವನ್ನಾಗಿಸಲು ಯೋಜನೆ ರೂಪಿಸಿದ್ದಾರೆ. ಕೆಳ ಹಂತದ ಅಧಿಕಾರಿಗಳಿಗೆ ಚುರುಕು: ರಾಯಚೂರು ನಗರಸಭೆಯಿಂದ ಮಹಾನಗರ ಪಾಲಿಕೆಯಾಗಿ ಮೇಲ್ದರ್ಜೆಗೆ ಏರಿದರೂ ಕೆಳ ಹಂತದ ಅಧಿಕಾರಿಗಳ ನಿರಾಸಕ್ತಿ, ಜಿಡ್ಡುಗಟ್ಟಿದ ಆಡಳಿತ ವ್ಯವಸ್ಥೆ, ಭ್ರಷ್ಟಾಚಾರವನ್ನು ಕಡಿಮೆಗೊಳಿಸಿ, ಮಧ್ಯ ವರ್ತಿಗಳಹಾವಳಿ ಕಡಿಮೆ ಮಾಡಿ ಜನಸ್ನೇಹಿಯಾಗಿ ಕೆಲಸ ಮಾಡಿ ಮಾದರಿಯಾಗಿದ್ದಾರೆ. ಸಾರ್ವಜನಿಕರ, ಸಂಘ ಸಂಸ್ಥೆಗಳ ಮುಖಂಡರು ತಮ್ಮ ದೂರು, ಅಹವಾಲು ಸಲ್ಲಿಸಲು ಕಚೇರಿಯಲ್ಲಿ ಕುಂದುಕೊರತೆ ವಿಭಾಗ ಸ್ಥಾಪಿಸಿದ್ದಲ್ಲದೇ ತಮ್ಮ ವೈಯಕ್ತಿಕ ಮೊಬೈಲ್ ಸಂಖ್ಯೆಗೆ ಕರೆ ಮಾಡಿದರೂ, ವಾಟ್ಸ ಪ್ ಮಾಡಿದರೂ ಸ್ಪಂದಿಸಿ ಕೆಳ ಹಂತದ ಅಧಿಕಾರಿಗಳಿಗೆ ನಿರ್ದೇಶನ ನೀಡಿ ಸಮಸ್ಯೆಗೆ ಪರಿಹಾರ ಕಲ್ಪಿಸಿಕೊಟ್ಟಿದ್ದಾರೆ.

ಅನೇಕ ವರ್ಷಗಳಿಂದ ಕಟ್ಟಡ, ಮನೆಯ ಕರ,ನಳದ ಕರ ಪಾವತಿಸದೇ ಲಕ್ಷಾಂತರ ರೂಪಾಯಿ ವರೆಗೆ ಏರಿದರೂ ತಲೆಕೆಡಿಸಿಕೊಳ್ಳದ ಗ್ರಾಹಕರಿಗೆ ರಿಯಾಯಿತಿ ದರದಲ್ಲಿ ಕರ ಪಾವತಿಗೆ ಅನುಕೂಲ ಮಾಡಿ ಪಾಲಿಕೆಯ ಖಜಾನೆ ತುಂಬಿಸುವ ಕೆಲಸ ಮಾಡಿದ್ದಾರೆ. ಮಳೆಗಾಲದಲ್ಲಿ ಅನೇಕ ತಗ್ಗುಪ್ರದೇಶಗಳು ಜಲಾವೃತ್ತವಾಗುವುದನ್ನು ತಡೆಯಲು ಒತ್ತುವರಿ ತೆರವು ಮಾಡಿದ್ದಾರೆ. ಅನೇಕ ವರ್ಷಗಳಿಂದ ಸ್ವಚ್ಛಗೊಳಿಸಲಾಗದ ರಾಜಕಾಲುವೆಗಳು, ಚರಂಡಿಗಳನ್ನು ಸ್ವಚ್ಛಗೊಳಿಸಿ ಟನ್ ಗಟ್ಟಲೇ ಹೂಳು ತೆಗೆಸಿದ್ದಾರೆ.

ಪ್ರತಿಯೊಂದು ಕೆಲಸಕ್ಕೆ ಅನುದಾನವಿಲ್ಲವೆಂದು ಕೈ ಚೆಲ್ಲದೇ ಸ್ಥಳೀಯ ದಾನಿಗಳಿಂದ ಮಾತ್ರವಲ್ಲದೆ ಅನ್ಯರಾಜ್ಯದ ಕಂಪನಿಗಳಿಗೆ ಭೇಟಿಯಾಗಿ ಸಿಎಸ್ ಆರ್ ಫಂಡ್ ಮೂಲಕ ಅನೇಕ ಅಭಿವೃದ್ಧಿ ಕಾರ್ಯಗಳನ್ನು ಮಾಡುತ್ತಿದ್ದಾರೆ.

ರಾಜಕೀಯ ನಾಯಕರ ಕಿತ್ತಾಟದಿಂದ ಜುಬಿನ್ ಅವರ ವರ್ಗಾವಣೆಯಾಗಿದೆಯಾ: ಜಿಲ್ಲೆಯಲ್ಲಿ ರಾಜಕೀಯ ನಾಯಕರ(ಸ್ವಪಕ್ಷದವರ) ಕಿತ್ತಾಟದಿಂದ ಅನ್ಯ ಜಿಲ್ಲೆಯ ನಾಯಕರಿಗೆ ಉಸ್ತುವಾರಿ ಸಚಿವರ ನೇಮಕ ಮಾಡುವುದು ಒಂದೆಡೆಯಾದರೆ ಜಿಲ್ಲೆಯ ಅಭಿವೃದ್ಧಿ ಕೆಲಸ ಮಾಡುವ ಐಎಎಸ್ ಅಧಿಕಾರಿಗಳನ್ನು ಒಬ್ಬರು ಕರೆತಂದರೆ ಮತ್ತೊಬ್ಬ ನಾಯಕರ ಗುಂಪು ಅನ್ಯ ಜಿಲ್ಲೆಗೆ ವರ್ಗಾವಣೆ ಮಾಡಿಸುತ್ತಿದ್ದಾರೆ ಎಂಬ ಆರೋಪವಿದೆ, ಚೆನ್ನಾಗಿ ಕೆಲಸ ಮಾಡುತ್ತಾ ಸಾಕಷ್ಟು ಪರಿವರ್ತನೆಗೆ ಕಾರಣರಾದ ಜುಬೀನ್ ಮೊಹಪಾತ್ರ ಅವರ ದಿಢೀರ್ ವರ್ಗಾವಣೆಯ ಹಿಂದೆ ಕೆಲ ನಾಯಕರ ಕೈವಾಡವಿದೆ ಎಂದು ಹೇಳಲಾಗುತ್ತಿದೆ.ಏನೇ ಆದರೂ ಗಂಡ ಹೆಂಡತಿಯ ಜಗಳದ ನಡುವೆ ಕೂಸು ಬಡವಾಯಿತು ಎಂಬಂತಾಗಿದೆ ನಗರ ವಾಸಿಗಳ ಪರಿಸ್ಥಿತಿ.

ಎಸ್‌ಐಆರ್ ಜಾಗೃತಿಗೆ ಆರೋಗ್ಯ ಇಲಾಖೆ ಜಾಥಾ

ಪೂರ್ಣಗೊಂಡ ಪ್ರತಿಯೊಬ್ಬ ಮಹಿಳೆ ಹಾಗೂ ಪುರುಷರು ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕು. ಪಟ್ಟಿಯಲ್ಲಿ ಹೆಸರು ತಪ್ಪಿದ್ದರೆ ಕೂಡಲೇ ಹೆಸರು ಸೇರ್ಪಡೆ ಮಾಡಿಕೊಳ್ಳಬೇಕು ಎಂದು ಸಾರ್ವಜನಿಕರಿಗೆ ಕರೆ ನೀಡಿದರು.

ಬೆಳಿಗ್ಗೆ 9.30ಕ್ಕೆ ಡಿಎಚ್‌ಒ ಕಚೇರಿಯಿಂದ ಆರಂಭವಾದ ಜಾಥಾವು ತೀನ್ ಕಂದಿಲ್, ಮಹಾವೀರ ಸರ್ಕಲ್, ಜೈನ್ ಟೆಂಪಲ್ ಮಾರ್ಗವಾಗಿ ಸಂಚರಿಸಿ ಡಿಎಚ್‌ಒ ಕಚೇರಿ ಆವರಣಕ್ಕೆ ಮರಳಿತು. ಜಾಥಾದಲ್ಲಿ ಪಾಲ್ಗೊಂಡ ಆರೋಗ್ಯ ಇಲಾಖೆ ಸಿಬ್ಬಂದಿ ಹಾಗೂ ಆಶಾ ಕಾರ್ಯಕರ್ತೆಯರು ಎಸ್‌ಐಆರ್ ಮತದಾರರ ನೋಂದಣಿ ಮತ್ತು ಹೆಸರು ತಿದ್ದುಪಡಿ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಿದರು.

ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಡಾ. ಅಶೋಕ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ್ ಹೆಚ್. ದಾಸಪ್ಪನವರ್, ತಾಲೂಕು ಆರೋಗ್ಯ ಶಿಕ್ಷಣಾಧಿಕಾರಿ ಬಸ್ಸ ಯ್ಯ ಸೇರಿದಂತೆ ಆರೋಗ್ಯ ಇಲಾಖೆ ಅಧಿಕಾರಿಗಳು, ಸಿಬ್ಬಂದಿ ಹಾಗೂ ಆಶಾ ಕಾರ್ಯಕರ್ತೆಯರು ಪಾಲ್ಗೊಂಡಿದ್ದರು.

ಗಣೇಶೋತ್ಸವ: ರಾಯಚೂರಿನಲ್ಲಿ ಪೊಲೀಸ್ ಕಟ್ಟೆಚ್ಚರ

ಸಂಬಂಧಪಟ್ಟ ಇಲಾಖೆಗಳ ಅನುಮತಿ ಪಡೆಯಬೇಕು. ಬೆಳಿಗ್ಗೆ 6ರಿಂದ ರಾತ್ರಿ 10ರವರೆಗೆ ಮಾತ್ರ ಧ್ವನಿವರ್ಧಕ ಬಳಸಲು ಅವಕಾಶವಿದ್ದು, ನಿಯಮ ಉಲ್ಲಂಘಿಸಿದರೆ ಕಾನೂನು ಕ್ರಮ ಜರುಗಿಸಲಾಗುವುದು.

ಮಂಟಪ ಹಾಗೂ ಮೆರವಣಿಗೆಯಲ್ಲಿ ಅಶ್ಲೀಲ ಹಾಡುಗಳು, ಕೋಮುಭಾವನೆ ಕೆರಳಿಸುವ ಘೋಷಣೆ, ಭಾಷಣಗಳಿಗೆ ಅವಕಾಶವಿಲ್ಲ. ಅನುಮತಿ ಪಡೆದ ಮಾರ್ಗದಲ್ಲಿಯೇ ಮೆರವಣಿಗೆ ನಡೆಸಬೇಕು. ಕತ್ತಿ, ಖಡ್ಗ, ತಲವಾರ, ಈಟಿ, ಭರ್ಚಿ ಸೇರಿದಂತೆ ಅಪಾಯಕಾರಿ ಆಯುಧಗಳ ಬಳಕೆ, ಬೆಂಕಿ ಆಟ ಹಾಗೂ ಕರ್ಕಶ ವಾದ್ಯಗಳ ಪ್ರದರ್ಶನ ನಿಷೇಧಿಸಲಾಗಿದೆ. ಮಂಟಪಗಳಲ್ಲಿ ಅಗ್ನಿಶಾಮಕ ಉಪಕರಣ, ನೀರು, ಮರಳು ಹಾಗೂ ಪ್ರಥಮ ಚಿಕಿತ್ಸಾ ಕಿಟ್ ಇರಿಸಿಕೊಳ್ಳಬೇಕು. ವಿಸರ್ಜನೆ ಪೂರ್ಣಗೊಂಡ ಕೂಡಲೇ ಮಂಟಪ ತೆರವುಗೊಳಿಸುವಂತೆ ಗಣೇಶ ಮಂಡಳಿಗಳಿಗೆ ಸೂಚಿಸಲಾಗಿದೆ. ಶಾಂತಿ, ಸೌಹಾರ್ದತೆ ಮತ್ತು ಸುರಕ್ಷತೆಗೆ ಆದ್ಯತೆ ನೀಡಿ ಗಣೇಶೋತ್ಸ ವವನ್ನು ಸಂಭ್ರಮದಿಂದ ಆಚರಿಸುವಂತೆ ಜಿಲ್ಲಾ ಪೊಲೀಸ್ ಇಲಾಖೆ ಸಾರ್ವಜನಿಕರಲ್ಲಿ ಮನವಿ ಮಾಡಿದೆ.

ಗ್ಯಾರಂಟಿಗಳಿಂದ ಜನರಿಗೆ ದರ ಏರಿಕೆ ಹೊರೆ ತಗ್ಗಿದೆ : ಸಚಿವ ಈಶ್ವರ್ ಖಂಡ್ರೆ



ಬೀದರ್,ಸೆ.09-

ಕೇಂದ್ರ ಸರ್ಕಾರ ಪೆಟ್ರೋಲ್, ಡೀಸೆಲ್ ಸೇರಿದಂತೆ ಜೀವನಾವಶ್ಯಕ ವಸ್ತುಗಳ ಬೆಲೆ ಏರಿಕೆ ಮಾಡಿದ್ದರೂ, ರಾಜ್ಯ ಸರ್ಕಾರ ಜಾರಿಗೆ ತಂದಿರುವ ಗ್ಯಾರಂಟಿ ಯೋಜನೆಗಳಿಂದ ಜನರು ಆ ಹೊರೆ ತಡೆದುಕೊಳ್ಳಲು ಸಾಧ್ಯವಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ್ ಖಂಡ್ರೆ ಹೇಳಿದರು.

ಭಾಲ್ಕಿ ತಾಲೂಕಿನ ಮೆಹಕರ್ ಗ್ರಾಮದಲ್ಲಿ ಮಂಗಳವಾರ ನಡೆದ ತಾಲೂಕು ಮಟ್ಟದ ಪ್ರಜಾಸೇವೆ ಆಂದೋಲನ ಉದ್ಘಾಟಿಸಿ ಮಾತನಾಡಿದ ಅವರು, ಗ್ಯಾರಂಟಿ ಯೋಜನೆಗಳಿಂದ ರಾಜ್ಯ ದಿವಾಳಿಯಾಗುತ್ತದೆ ಎಂದು ಪ್ರತಿಪಕ್ಷಗಳು ಟೀಕಿಸಿದ್ದವು. ಆದರೆ ಕಾಂಗ್ರೆಸ್ ಸರ್ಕಾರ ಗ್ಯಾರಂಟಿಗಳನ್ನೂ ಯಶಸ್ವಿಯಾಗಿ ಜಾರಿ ಮಾಡಿದ್ದು, ಅಭಿವೃದ್ಧಿ ಕಾಮಗಾರಿಗಳನ್ನೂ ಮುಂದುವರಿಸಿದೆ. ಮೆಹಕರ್‌ನಲ್ಲಿ 4.5 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣವಾದ ಸರ್ಕಾರಿ ಪ್ರಾಥಮಿಕ ಶಾಲೆಯ ನೂತನ ಕಟ್ಟಡವೇ ಇದಕ್ಕೆ ಸಾಕ್ಷಿ ಎಂದು ಹೇಳಿದರು.

ಚುನಾವಣಾ ಪೂರ್ವದಲ್ಲಿ ನೀಡಿದ್ದ ಐದು ಗ್ಯಾರಂಟಿಗಳನ್ನು ಸರ್ಕಾರ ಯಶಸ್ವಿಯಾಗಿ ಜಾರಿಗೆ ತಂದಿದೆ. ಗ್ಯಾರಂಟಿಗಳ ಜನಪ್ರಿಯತೆಯಿಂದ ಪ್ರತಿಪಕ್ಷಗಳು ಕಂಗೆಟ್ಟಿವೆ ಎಂದು ಅವರು ವಾಗ್ದಾಳಿ ನಡೆಸಿದರು.

ಬೀದರ್ ಜಿಲ್ಲೆಯಲ್ಲಿ ಗೃಹಲಕ್ಷ್ಮೀ ಯೋಜನೆಯಡಿ 3.64 ಲಕ್ಷಕ್ಕೂ ಹೆಚ್ಚು ಮಹಿಳೆಯರಿಗೆ 2,092.92 ಕೋಟಿ ರೂ., ಅನ್ನಭಾಗ್ಯ ಯೋಜನೆಯಡಿ 333.28 ಕೋಟಿ ರೂ., ಗೃಹಜ್ಯೋತಿ ಯೋಜನೆಯಡಿ 589.23 ಕೋಟಿ ರೂ. ಪಾವತಿಸಲಾಗಿದೆ. ಶಕ್ತಿ ಯೋಜನೆಯಡಿ 13.89 ಕೋಟಿ ಮಹಿಳೆಯರು ಉಚಿತ ಬಸ್ ಪ್ರಯಾಣ ಮಾಡಿದ್ದಾರೆ. ಯುವನಿಧಿ ಯೋಜನೆಯಡಿ ಜಿಲ್ಲೆಯ ನಿರುದ್ಯೋಗಿ ಯುವಕರಿಗೆ 57.12 ಕೋಟಿ ರೂ. ನೆರವು ನೀಡಲಾಗಿದೆ ಎಂದು ಮಾಹಿತಿ ನೀಡಿದರು.

ಮೆಹಕರ್ ಭಾಲ್ಕಿ ರಸ್ತೆ ಅಭಿವೃದ್ಧಿಗೆ ಸಾಯಗಾಂವ್ ಮಾರ್ಗವಾಗಿ 5 ಕೋಟಿ ರೂ. ಮಂಜೂರು ಮಾಡಲಾಗಿದ್ದು, ಕಾಮಗಾರಿಗೆ ಚಾಲನೆ ನೀಡಲಾಗಿದೆ. ಮೆಹಕರ್ ಅಭಿವೃದ್ಧಿಗೆ ನೀಡಿದ್ದ ಎಲ್ಲ ಭರವಸೆಗಳನ್ನು ಹಂತ ಹಂತವಾಗಿ ಈಡೇರಿಸಲಾಗುತ್ತಿದೆ ಎಂದು ಸಚಿವರು ತಿಳಿಸಿದರು.


ಪ್ರಜಾಸೇವೆ ಆಂದೋಲನದ ಮೂಲಕ ಪಿಂಚಣಿ, ವಸತಿ, ನಿವೇಶನ, ಪೋಡಿ, ಶಾಲೆ, ಅಂಗನವಾಡಿ, ಪೊಲೀಸ್ ಸೇರಿದಂತೆ ವಿವಿಧ ಇಲಾಖೆಗಳ ಸೇವೆಗಳಿಗೆ ಸಂಬಂಧಿಸಿದ ದೂರುಗಳನ್ನು ಸ್ಥಳದಲ್ಲೇ ಸ್ವೀಕರಿಸಿ ಪರಿಹರಿಸಲಾಗುತ್ತಿದೆ. ಪ್ರತಿ ತಿಂಗಳ ಎರಡನೇ ಶನಿವಾರ ಬೀದರ್ ಜಿಲ್ಲೆಯಲ್ಲಿ ಈ ಕಾರ್ಯಕ್ರಮ ನಡೆಸಿ ಜನರ ಸಮಸ್ಯೆಗಳಿಗೆ ಮಧ್ಯವರ್ತಿಗಳಿಲ್ಲದೆ ಪರಿಹಾರ ಒದಗಿಸಲಾಗುವುದು ಎಂದರು.

ರಾಜ್ಯದಲ್ಲಿ ಎಲ್‌ನಿನೋ ಪರಿಣಾಮ ಮಳೆಯ ಕೊರತೆ ಉಂಟಾಗಿದ್ದು, ಈಗಾಗಲೇ 101 ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶಗಳೆಂದು ಘೋಷಿಸಲಾಗಿದೆ. ಎರಡನೇ ಹಂತದಲ್ಲಿ ಭಾಲ್ಕಿ ತಾಲೂಕಿನನ್ನೂ ಬರಪೀಡಿತ ಪಟ್ಟಿಗೆ ಸೇರಿಸುವ ವಿಶ್ವಾಸವಿದೆ ಎಂದು ಈಶ್ವರ್ ಖಂಡ್ರೆ ಹೇಳಿದರು.

ಕಾರ್ಯಕ್ರಮದಲ್ಲಿ ಮೆಹಕರ್ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಜನರು ತಮ್ಮ ಅಹವಾಲುಗಳನ್ನು ಸಚಿವರ ಮುಂದಿಟ್ಟು, ಸಂಬಂಧಿತ ಅಧಿಕಾರಿಗಳಿಗೆ ಸ್ಥಳದಲ್ಲೇ ಸಮಸ್ಯೆ ಪರಿಹರಿಸುವಂತೆ ಸಚಿವರು ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಿ. ರಂದೀಪ್, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಗಿತ್ತೆ ವಿಠ್ಠಲ್ ಮಾಧವರಾವ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ, ಗ್ಯಾರಂಟಿ ಸಮಿತಿಯ ಜಿಲ್ಲಾಧ್ಯಕ್ಷ ಅಮೃತರಾವ್ ಚಿಮಕೋಡ್ ಹಾಗೂ ಅರಣ್ಯ ಅಭಿವೃದ್ಧಿ ನಿಗಮದ ಹನುಮಂತರಾವ್ ಚವ್ಹಾಣ್ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು.

ಶೂನ್ಯ ಲಿಂಗ ವಿವೇಚನೆ ಭಾಗ-5 ಕೃತಿ ಬಿಡುಗಡೆ ಸಮಾರಂಭ



ಕಲಬುರಗಿ ,ಸೆ.08-

ಕಾಯಕದ ಮೂಲಕ ಉತ್ಪಾದನೆ ಮಾಡಿ ಸಮಾಜದ ಎಲ್ಲರಿಗೂ ಹಂಚುವ ಶರಣ ಸಂಸ್ಕೃತಿಯನ್ನು ಇಂದಿನ ಸಮಾಜದಲ್ಲಿ ಬಿತ್ತಿ ಬೆಳೆಸುವ ಅಗತ್ಯವಿದ್ದು, ಯುವ ಪೀಳಿಗೆಗೆ ವಚನ ಸಾಹಿತ್ಯದ ಪರಿಚಯ ಮಾಡಿಕೊಡಬೇಕು ಎಂದು ಬೀದರ್ ವಚನ ಸಮೂಹ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ ಅಲ್ಲಮಪ್ರಭು ನಾವದಗೆರೆ ಹೇಳಿದರು.

ಶಹಾಬಾದ್ ಬಸವ ಸಮಿತಿ (ಅಲ್ ಸ್ಟಾವ್ ಕಾಲೋನಿ) ವತಿಯಿಂದ ಭಂಕೂರಿನ ಶಾಂತನಗರ ಬಸವ ಮಂಟಪದಲ್ಲಿ ಸೋಮವಾರ ನಡೆದ ಬಸವರಾಜ ವೆಂಕಟಾಪುರ ಶರಣರು ರಚಿಸಿದ ಶೂನ್ಯಲಿಂಗ ವಿವೇಚನೆ (ಫ.ಗು. ಹಳಕಟ್ಟಿ ಸಂಪಾದಿತ ವಚನಶಾಸ್ತ್ರ, ಸಾರ ಭಾಗ-1ರ ವಚನ ವಿವೇಚನೆ ಭಾಗ-5) ಕೃತಿ ಬಿಡುಗಡೆ ಸಮಾರಂಭ ವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕೃತಿ ಕುರಿತು ಮಾತನಾಡಿದ ಬಸವ ಚಿಂತಕ ಡಾ. ಶಿವರಂಜನ ಸತ್ಯಂಪೇಟೆ, ವಚನಶಾಸ್ತ್ರ ಪಿತಾಮಹ ಡಾ. ಫ.ಗು. ಹಳಕಟ್ಟಿ ಸಂಪಾದಿತ ವಚನಶಾಸ್ತ್ರ ಸಾರ ಮೊದಲ ಸಂಪುಟದ ವಚನಗಳನ್ನು ಸರಳ ಭಾಷೆಯಲ್ಲಿ ಅರ್ಥವತ್ತಾಗಿ ವಿಶ್ಲೇಷಿಸಿರುವ ಈ ಕೃತಿ ವಚನ ಸಾಹಿತ್ಯಕ್ಕೆ ಮಹತ್ವದ ಕೊಡುಗೆ ಎಂದರು. ವಚನಗಳ ಒಳಾರ್ಥವನ್ನು ಗ್ರಹಿಸಲು ನಿರಂತರ ಅಧ್ಯಯನ ಮತ್ತು ಅನುಭಾವ ಅಗತ್ಯ ಎಂದು ಹೇಳಿದರು.

ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಅಧ್ಯಕ್ಷ ವಿಜಯಕುಮಾರ ಪಾಟೀಲ ತೇಗಲತಿಪ್ಪಿ ಕೃತಿ ಬಿಡುಗಡೆ ಮಾಡಿ ಮಾತನಾಡಿ, ವಚನಗಳು ಬದುಕಿಗೆ ಬೆಳಕು ನೀಡುವ ದಾರಿದೀಪಗಳಾಗಿವೆ. ಹಣಕ್ಕಿಂತ ಹೃದಯ ಶ್ರೀಮಂತಿಕೆ ಬೆಳೆಸುವ ಸಂದೇಶವನ್ನು ವಚನಗಳು ನೀಡುತ್ತವೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಭಂಕೂರ ಬಸವ ಸಮಿತಿ ಅಧ್ಯಕ್ಷ ಅಶೋಕ ವಿ. ಘೂಳಿ ವಹಿಸಿದ್ದರು. ಜಾಗತಿಕ ಲಿಂಗಾಯತ ಮಹಾಸಭಾ ಜಿಲ್ಲಾ ಅಧ್ಯಕ್ಷ ಆರ್.ಜಿ. ಶೆಟಗಾರ, ರಾಜೋಳ ಬಸವ ಭಾರತಿ ಯೋಗಧಾಮದ ಲೋಕೇಶ ಗುರೂಜಿ ಹಾಗೂ ಬಸವರಾಜ ವೆಂಕಟಾಪುರ ಶರಣರು ಸಾನ್ನಿಧ್ಯ ವಹಿಸಿದ್ದರು.

ಪಂಪಾಪತಿ ಮೇಟಿ ಕಾರ್ಯಕ್ರಮ ನಿರೂಪಿಸಿದರು. ಬಸವ ಸಮಿತಿ ಕಾರ್ಯದರ್ಶಿ ಮಲ್ಲಿಕಾರ್ಜುನ ಎಸ್. ಪದ್ಮಾಜಿ ಸ್ವಾಗತಿಸಿದರು. ಎಚ್.ಬಿ. ತೀರ್ಥೆ ವಂದಿಸಿದರು. ರೇವಣಸಿದ್ದಪ್ಪ ಮುಸ್ತಾರಿ, ಕಂಟೆಪ್ಪ ಬಿರಾದಾರ, ಶಿವಪುತ್ರ ಕುಂಬಾರ, ಅಮೃತ ಮಾನಕರ್ ಶಿವಶರಣಪ್ಪ ಜಟ್ಟೂರಕರ, ಗುರುಲಿಂಗಪ್ಪ ಪಾಟೀಲ ಸೇರಿದಂತೆ ಹಲವರು ಉಪಸ್ಥಿತರಿದ್ದರು.



ಶ್ರೀ ಧನಲಕ್ಷ್ಮೀ ಸೌಹಾರ್ದ ಪತ್ತಿನ ಸಹಕಾರ ಸಂಘಕ್ಕೆ ಉತ್ತಮ ಸಹಕಾರಿ ಸಂಸ್ಥೆ ಪ್ರಶಸ್ತಿ

ಆಳಂದ,ಸೆ.09-

ಗ್ರಾಮೀಣ ಭಾಗದ ಜನರು, ರೈತರು ಹಾಗೂ ಸಣ್ಣ ವ್ಯಾಪಾರಿಗಳಿಗೆ ಆರ್ಥಿಕ ಆಸರೆಯಾಗಿರುವ ತಾಲೂಕಿನ ಸರಸಂಬಾ ಗ್ರಾಮದ ಶ್ರೀ ಧನಲಕ್ಷ್ಮೀ ಸೌಹಾರ್ದ ಪತ್ತಿನ ಸಹಕಾರ ಸಂಘ 2026-27ನೇ ಸಾಲಿನ ರಾಜ್ಯಮಟ್ಟದ ಉತ್ತಮ ಸಹಕಾರಿ ಸಂಸ್ಥೆ ಪ್ರಶಸ್ತಿಗೆ ಭಾಜನವಾಗಿದೆ.


ಬೆಂಗಳೂರಿನಲ್ಲಿ ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ (ನಿ.) ವತಿಯಿಂದ ಆಯೋಜಿಸಿದ್ದ ಸಂಯುಕ್ತ ಸಹಕಾರಿ ಬೆಳ್ಳಿ ಮಹೋತ್ಸ ವ ಕಾರ್ಯಕ್ರಮದಲ್ಲಿ ಸಂಘಕ್ಕೆ ಈ ಪ್ರತಿಷ್ಠಿತ ಪ್ರಶಸ್ತಿ ಪ್ರದಾನ ಮಾಡಲಾಯಿತು.

ರಾಜ್ಯದಾದ್ಯಂತ ಕೇವಲ ಐದು ಅತ್ಯುತ್ತಮ ಸಹಕಾರಿ ಸಂಸ್ಥೆಗಳನ್ನು ಆಯ್ಕೆ ಮಾಡಿ ಗೌರವಿಸಲಾಗಿದ್ದು, ಅವುಗಳಲ್ಲಿ ಶ್ರೀ ಧನಲಕ್ಷ್ಮೀ ಸೌಹಾರ್ದ ಪತ್ತಿನ ಸಹಕಾರ ಸಂಘ ಸ್ಥಾನ ಪಡೆದಿರುವುದು ವಿಶೇಷವಾಗಿದೆ.

ಐದು ಶಾಖೆಗಳ ಮೂಲಕ ಕೋಟ್ಯಂತರ ರೂಪಾಯಿ ವ್ಯವಹಾರ ನಡೆಸುತ್ತಿರುವ ಸಂಘವು ಗ್ರಾಮೀಣ ಜನತೆ, ರೈತರು ಹಾಗೂ ಸಣ್ಣ ವ್ಯಾಪಾರಿಗಳಿಗೆ ವಿವಿಧ ಹಣಕಾಸು ಸೇವೆಗಳನ್ನು ಒದಗಿಸುವ ಮೂಲಕ ಸಹಕಾರ ಕ್ಷೇತ್ರದಲ್ಲಿ ಗಮನಾರ್ಹ ಸಾಧನೆ ಮಾಡಿದೆ.

ಸಂಘಕ್ಕೆ ರಾಜ್ಯಮಟ್ಟದ ಪ್ರಶಸ್ತಿ ಲಭಿಸಿರುವುದು ಆಳಂದ ತಾಲೂಕಿನ ಸಹಕಾರಕ್ಷೇತ್ರಕ್ಕೆಹೆಮ್ಮೆಯ ಸಂಗತಿಯಾಗಿದ್ದು, ಸದಸ್ಯರು ಹಾಗೂ ಗ್ರಾಮಸ್ಥರು ಸಂತಸ ವ್ಯಕ್ತಪಡಿಸಿದ್ದಾರೆ.

ಪ್ರಶಸ್ತಿ ಪ್ರದಾನ ಸಂದರ್ಭದಲ್ಲಿ ಸಂಘದ ಉಪಾಧ್ಯಕ್ಷ ಸೋಮಲಿಂಗ ಕೌಲಗಿ, ನಿರ್ದೇಶಕರಾದ ವಿಠಲ ಖಾನಾಪುರೆ, ಶ್ರೀಕಾಂತ್ ದೇಶಟ್ಟಿ, ಯೋಗಿರಾಜ ಮಾಡ್ಯಾಳೆ, ದೀಪಾ ಮಾಡ್ಯಾಳೆ, ಕವಿತಾ ಹಿರೇಮಠ, ವಿಜಯಲಕ್ಷ್ಮಿ ಕೊರಳ್ಳಿ, ಮಲ್ಲಿನಾಥ ಯಲಶೆಟ್ಟಿ, ಶಿವಕುಮಾರ ಬಾರಾಬಾಯಿ ಹಾಗೂ ಸಂಘದ ವ್ಯವಸ್ಥಾಪಕ ಸೋಮನಾಥ ನಿಂಬರ್ಗಿ ಉಪಸ್ಥಿತರಿದ್ದರು.



ಲಚ್ಚಪ್ಪ ಜಮಾದಾರ್ ವಿರುದ್ಧ ಅವಹೇಳನ ಖಂಡಿಸಿ ಸೆ.10ರಂದು ಅಫಜಲಪುರದಲ್ಲಿ ಪ್ರತಿಭಟನೆ

ಅಫಜಲಪುರ,ಸೆ.09-

ಕೋಲಿ ಕಬ್ಬಲಿಗ ಎಸ್ಟಿ ಹೋರಾಟ ಸಮಿತಿ ರಾಜ್ಯಾಧ್ಯಕ್ಷ ಲಚ್ಚಪ್ಪ ಜಮಾದಾರ್ ಅವರ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡಲಾಗಿದೆ ಎಂದು ಆರೋಪಿಸಿ, ಸಂಬಂಧಪಟ್ಟವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿ ಸೆಪ್ಟೆಂಬರ್ 10ರಂದು ಅಫಜಲಪುರದಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ.

ಈ ಕುರಿತು ಪಟ್ಟಣದ ಪ್ರವಾಸಿ ಮಂದಿರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ದಲಿತ ಹಿರಿಯ ಮುಖಂಡ ಭೀಮರಾಯ ಗೌರ ಹಾಗೂ ದಲಿತ ಸೇನೆಯ ಕಲ್ಯಾಣ ಕರ್ನಾಟಕ ವಿಭಾಗದ ಉಸ್ತುವಾರಿ ಮಹಾಂತೇಶ್ ಬಳುಂಡಗಿ ಮಾಹಿತಿ ನೀಡಿದರು.

ಅಂಬೇಡ್ಕರ್ ವೃತ್ತದಿಂದ ತಹಸೀಲ್ದಾರ್ ಕಚೇರಿವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಿ, ತಹಸೀಲ್ದಾರ್ ಮೂಲಕ ಮುಖ್ಯಮಂತ್ರಿ ಅವರಿಗೆ ಮನವಿ ಸಲ್ಲಿಸಲಾಗುವುದು ಎಂದು ತಿಳಿಸಿದರು.

ಲಚ್ಚಪ್ಪ ಜಮಾದಾರ್ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡಿದವರ ವಿರುದ್ಧ ತಕ್ಷಣ ಕಾನೂನು ಕ್ರಮ ಜರುಗಿಸಬೇಕು ಎಂದು ದಲಿತ ಪರ ಸಂಘಟನೆಗಳು, ಕೋಲಿ ಕಬ್ಬಲಿಗ ಹೋರಾಟ ಸಮಿತಿ ಹಾಗೂ ವಿವಿಧ ಪ್ರಗತಿಪರ ಸಂಘಟನೆಗಳು ಒತ್ತಾಯಿಸಿವೆ.

ಸುದ್ದಿಗೋಷ್ಠಿಯಲ್ಲಿ ಕಾಶೀನಾಥ್ ಟಕ್ಕಳಕಿ, ಸತೀಶ್ ಜಮಾದಾರ್, ಅಶೋಕ್ ಸಿಂಗೆ, ಮಹಾನಿಂಗ್ ಅಂಗಡಿ, ಶಿವರಾಯ ನಾಟಿಕಾರ, ಸಿದ್ದಪ್ಪ ಸಿನ್ನೂರ್, ಅನಿಲ್ ಕಳಸಿ, ನಾಗು ಘತ್ತರಗಿ, ಮಹಾಂತೇಶ್ ಬಡಿಗೇರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ವೈಜ್ಞಾನಿಕ ಕುರಿ-ಮೇಕೆ ಸಾಕಾಣಿಕೆ ತರಬೇತಿ



ಚಿತ್ತಾಪುರ,ಸೆ.09-

ಕುರಿ ಮತ್ತು ಮೇಕೆ ಸಾಕಾಣಿಕೆಯನ್ನು ವೈಜ್ಞಾನಿಕವಾಗಿ ನಡೆಸುವ ಮೂಲಕ ರೈತರು ಹೆಚ್ಚಿನ ಆದಾಯ ಗಳಿಸಬಹುದು ಎಂಬ ಉದ್ದೇಶದಿಂದ ಪಟ್ಟಣದ ಪಶುಪಾಲನಾ ಸಭಾಂಗಣದಲ್ಲಿ ಎರಡು ದಿನಗಳ ವೈಜ್ಞಾನಿಕ ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿ ಕಾರ್ಯಕ್ರಮ ನಡೆಯಿತು.

ಪಶುಪಾಲನಾ ಇಲಾಖೆ ಚಿತ್ತಾಪುರ ಹಾಗೂ ಪಶು ವೈದ್ಯಕೀಯ ತರಬೇತಿ ಕೇಂದ್ರ ಕಲಬುರಗಿ ಸಹಯೋಗದಲ್ಲಿ ಆಯೋಜಿಸಲಾದ ತರಬೇತಿಯಲ್ಲಿ ತಾಲೂಕಿನ ಸುಮಾರು 70 ಮಂದಿ ಕುರಿ-ಮೇಕೆ ಸಾಕಾಣಿಕೆದಾರರು ಹಾಗೂ ಆಸಕ್ತ ರೈತರು ಭಾಗವಹಿಸಿದರು.

ತರಬೇತಿಯಲ್ಲಿ ಕುರಿ ಮತ್ತು ಮೇಕೆಗಳಲ್ಲಿ ಸಾಮಾನ್ಯವಾಗಿ ಕಂಡುಬರುವ ರೋಗಗಳ ಲಕ್ಷಣಗಳು, ಮುಂಜಾಗ್ರತಾ ಲಸಿಕೆಗಳು

, ಜಂತುನಾಶಕ ಔಷಧಿಗಳ ಬಳಕೆ, ವೈಜ್ಞಾನಿಕ ಸಾಕಾಣಿಕೆ ವಿಧಾನಗಳು, ಶೆಡ್ ನಿರ್ಮಾಣ, ವಿವಿಧ ತಳಿಗಳ ಆಯ್ಕೆ ಹಾಗೂ ಪೌಷ್ಟಿಕ ಪಶು ಆಹಾರದ ಕುರಿತು ನುರಿತ ಪಶುವೈದ್ಯಾಧಿಕಾರಿಗಳು ಮಾಹಿತಿ ನೀಡಿದರು.

ಕುರಿ ಮತ್ತು ಮೇಕೆಗಳ ಆರೋಗ್ಯ ನಿರ್ವಹಣೆ, ಉತ್ಪಾದಕತೆ ಹೆಚ್ಚಿಸುವ ವಿಧಾನಗಳು ಹಾಗೂ ಆಧುನಿಕ ಸಾಕಾಣಿಕೆ ತಂತ್ರಗಳ ಕುರಿತು ರೈತರಿಗೆ ಪ್ರಾಯೋಗಿಕ ಮತ್ತು ತಾಂತ್ರಿಕ ಮಾರ್ಗದರ್ಶನ ನೀಡಲಾಯಿತು.

ಕಲಬುರಗಿ ತರಬೇತಿ ಕೇಂದ್ರದ ಉಪನಿರ್ದೇಶಕ ಡಾ. ದಯಾನಂದ ಹಕ್ಕಪಕ್ಕಿ, ಪುರಸಭೆ ಮಾಜಿ ಅಧ್ಯಕ್ಷ ಮಲ್ಲಿಕಾರ್ಜುನ ಕಾಳಗಿ, ಸಹಾಯಕ ನಿರ್ದೇಶಕ ಡಾ. ಶಂಕರ ಕಣ್ಣಿ, ಉಪನ್ಯಾಸಕರಾಗಿ ಡಾ. ಶರಣಬಸಪ್ಪ ಲಿಂಗದಳ್ಳಿ, ಡಾ. ಮಂಜುನಾಥ್, ಡಾ. ಅಭಿಲಾಶ್, ಡಾ. ಆಕಾಶ್, ಪೃಥ್ವಿ ಸಾಗರ್ ಸಿಬ್ಬಂದಿ ವರ್ಗದವರಾದ ವೀರಣ್ಣ, ರತನ್ ಕುಮಾರ್ ವಿಜಯಕುಮಾರ್ ಅಜಯ್ ಕುಮಾರ್ ಸೇರಿದಂತೆ ಇತರರು ಇದ್ದರು.

ನಿಮ್ಮೂರು ಸುದ್ದಿ

ಸಂಪಾದಕೀಯ



ಮಾರುವುದಿಲ್ಲ ಎಂದು ಮಾರುವ ಮೋದಿ ಈಗ ಇಸ್ರೋ ಸರದಿ?

ಇಸ್ರೋ ಸಂಸ್ಥೆಯನ್ನು ಭಾರತದ ಸಾರ್ವಜನಿಕ ಹಣದಿಂದ ಕಟ್ಟಲಾಗಿದೆ. ಇಂತಹ ಸದೃಢ ಇಸ್ರೋ ಸಂಸ್ಥೆಗೆ ಅಭಿವೃದ್ಧಿಯ ನೆಪದಲ್ಲಿ ಖಾಸಗಿ ಉದ್ಯಮಿಗಳನ್ನು ಆಹ್ವಾನಿಸುವುದು- ಭಾರತದ 60 ವರ್ಷಗಳ ಅಂತರಿಕ್ಷ ಸಾಮರ್ಥ್ಯದ ಲಾಭ ಅನಾಯಾಸವಾಗಿ ಅದಾನಿಗಳಂತಹ ಉದ್ಯಮಿಗಳ ಪಾಲಾದಂತೆ. ಇದನ್ನು ದೇಶದ ಜನ ಅರ್ಥ ಮಾಡಿಕೊಳ್ಳಬೇಕಿದೆ.

ಇಸ್ರೋ ಸಂಸ್ಥೆಯನ್ನು ಖಾಸಗೀಕರಣ ಮಾಡುವ ಪ್ರಶ್ನೆಯೇ ಇಲ್ಲ, ನೌಕರರು ಆತಂಕ ಪಡುವ ಅಗತ್ಯವೂ ಇಲ್ಲ, ಅದರ ಮಹತ್ವವೂ ಕಡಿಮೆಯಾಗುವುದಿಲ್ಲ ಎಂದು ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆಯ ಅಧ್ಯಕ್ಷ ವಿ. ನಾರಾಯಣನ್ ಸ್ಪಷ್ಟಪಡಿಸಿದ್ದಾರೆ.

ಇಸ್ರೋ ಅಧ್ಯಕ್ಷರು ಹೀಗೆ ಸಾರ್ವಜನಿಕವಾಗಿ ಸ್ಪಷ್ಟಪಡಿಸಲು ಕಾರಣ, ಇತ್ತೀಚೆಗೆ ಇಸ್ರೋದ ನೂರಾರು ಎಂಜಿನಿಯರ್ಗಳು ರಾಜೀನಾಮೆ ಕೊಟ್ಟು ಹೊರನಡೆದದ್ದು ಹಾಗೂ ಅದನ್ನು ಕಂಡು ಆತಂಕಗೊಂಡ ಇಸ್ರೋದ ಒಂಬತ್ತು ಪ್ರಮುಖ ನೌಕರರ ಸಂಘಗಳು ಸರ್ಕಾರದ ನಿರ್ಧಾರದ ಕುರಿತು ಅಧಿಕೃತ ಹಾಗೂ ಲಿಖಿತ ಸ್ಪಷ್ಟನೆ ನೀಡುವಂತೆ ಪತ್ರ ಬರೆದದ್ದು.

ನೂರಾರು ಎಂಜಿನಿಯರ್ ಗಳು ರಾಜೀನಾಮೆ ಕೊಡುವುದು ಸಣ್ಣ ಸಂಗತಿಯಲ್ಲ. ಹಾಗೆಯೇ ಇಸ್ರೋ ಒಳಗೆ ಎಂತಹ ಬೆಳವಣಿಗೆಗಳು ನಡೆಯುತ್ತಿವೆ ಎನ್ನುವುದು ಸಾಮಾನ್ಯರಿಗೆ ತಿಳಿಯುವುದಿಲ್ಲ. ತಿಳಿದಿರುವ ನೌಕರರ ಆತಂಕ ಮತ್ತು ಅನುಮಾನಗಳು ಅಧ್ಯಕ್ಷರ ಸ್ಪಷ್ಟೀಕರಣದ ನಂತರವೂ ತಿಳಿಗೊಂಡಂತೆ ಕಾಣುತ್ತಿಲ್ಲ.

ಏಕೆಂದರೆ, ಅದೇ ಅಧ್ಯಕ್ಷರು, ಭಾರತೀಯ ಬಾಹ್ಯಾಕಾಶ ಚಟುವಟಿಕೆಗಳ ವಿಸ್ತರಣೆಯ ಭಾಗವಾಗಿ ಖಾಸಗಿ ಕಂಪನಿಗಳು ಹಾಗೂ ನವೋದ್ಯಮಗಳ ಜೊತೆ ಸೇರಿ ಇಸ್ರೋ ಕಾರ್ಯ ನಿರ್ವಹಿಸುತ್ತಿದೆ. ಇದರ ಅರ್ಥ ಖಾಸಗೀಕರಣ ಅಲ್ಲ ಎಂದಿರುವುದು- ಅಳಿಯ ಅಲ್ಲ ಮಗಳ ಗಂಡ ಎನ್ನುವಂತಿದೆ. ಜೊತೆಗೆ, ರಾಕೆಟ್, ಉಪಗ್ರಹ ಮತ್ತು ವಾಣಿಜ್ಯ ಚಟುವಟಿಕೆಗಳ ಕೆಲವು ಜವಾಬ್ದಾರಿಗಳನ್ನು ಖಾಸಗಿ ಉದ್ಯಮಗಳಿಗೆ ಹಸ್ತಾಂತರಿಸುವ ಪ್ರಕ್ರಿಯೆಯೂ ವೇಗ ಪಡೆದಿದೆ.

ಇದಕ್ಕೆ ಪೂರಕವಾಗಿ ಇನ್-ಸ್ಪೇಸ್(-) ಸಂಸ್ಥೆಯ ಅಧ್ಯಕ್ಷ ಪವನ್ ಗೋಯೆಂಕಾ, ಮುಂದಿನ ದಿನಗಳಲ್ಲಿ ಇಸ್ರೋ ಯಾವುದೇ ಉಡಾವಣಾ ವಾಹನ(ರಾಕೆಟ್)ಗಳನ್ನು ತಯಾರಿಸುವುದಿಲ್ಲ; ಆ ಕಾರ್ಯವನ್ನು ಖಾಸಗಿ ವಲಯದ ಉದ್ಯಮಗಳು ನಿರ್ವಹಿಸಲಿವೆ ಎಂದಿರುವುದು, ಇಸ್ರೋ ಯಾವ ದಿಕ್ಕಿನತ್ತ ಹೆಜ್ಜೆ ಇಟ್ಟಿದೆ, ಮುಂದೆ ಏನಾಗಲಿದೆ ಎನ್ನುವುದನ್ನು ಸ್ಪಷ್ಟಪಡಿಸುತ್ತಿದೆ.

ಇಸ್ರೋ ಸಾಮಾನ್ಯ ಸಂಸ್ಥೆಯಲ್ಲ. ದೇಶದ ಬಾಹ್ಯಾಕಾಶ ಕ್ಷೇತ್ರವನ್ನು ಜಾಗತಿಕ ಮಟ್ಟದಲ್ಲಿ ಪ್ರತಿನಿಧಿಸುವ ಪ್ರತಿಷ್ಠಿತ ಸಂಸ್ಥೆ. ಈ ಸಂಸ್ಥೆಯನ್ನು ಸ್ಥಾಪಿಸಿದವರು ಮಾಜಿ ಪ್ರಧಾನಿ ಜವಾಹರಲಾಲ್ ನೆಹರೂ. 1962ರಲ್ಲಿ ಡಾ. ವಿಕ್ರಮ್ ಸಾರಾಭಾಯಿ ಅವರ ನೇತೃತ್ವದಲ್ಲಿ ಇಂಡಿಯನ್ ನ್ಯಾಷನಲ್ ಕಮಿಟಿ ಫಾರ್ ಸ್ಪೇಸ್ ರೀಸರ್ಚ್() ಎಂಬ ಸಮಿತಿಯನ್ನು ಸ್ಥಾಪಿಸಲಾಯಿತು. ಇದೇ ಸಂಸ್ಥೆ 1969ರಲ್ಲಿ ಇಸ್ರೋ ಆಗಿ ಮರುನಾಮಕರಣವಾಯಿತು.

ಭಾರತದ ಬಾಹ್ಯಾಕಾಶ ಸಂಸ್ಥೆಯ ಉದ್ದೇಶ ದೇಶದ ಆರ್ಥಿಕಾಭಿವೃದ್ಧಿಯನ್ನು ದೃಷ್ಟಿಯಲ್ಲಿಟ್ಟುಕೊಂಡು ರೂಪುಗೊಂಡಿತ್ತು. ಉಪಗ್ರಹಗಳ ಮೂಲಕ ದೂರಸಂಪರ್ಕ, ಹವಾಮಾನ ಮುನ್ಸೂಚನೆ, ಕೃಷಿ ನಿರ್ವಹಣೆ ಮತ್ತು ನೈಸರ್ಗಿಕ ವಿಕೋಪಗಳ ನಿಯಂತ್ರಣಕ್ಕೆ ಬಾಹ್ಯಾಕಾಶ ತಂತ್ರಜ್ಞಾನವನ್ನು ಬಳಸುವುದಾಗಿತ್ತು. ಉಪಗ್ರಹ ಚಿತ್ರಣಗಳ ಮೂಲಕ ದೇಶದ ನೀರು, ಖನಿಜ, ಅರಣ್ಯ ಮತ್ತು ಭೂಬಳಕೆಯ ಸಮೀಕ್ಷೆ ನಡೆಸುವುದಾಗಿತ್ತು. ಭಾರತದಲ್ಲೇ ಉಡಾವಣಾ ವಾಹನ(,)ಗಳನ್ನು ಮತ್ತು ಉಪಗ್ರಹಗಳನ್ನು ನಿರ್ಮಿಸುವ ಸಾಮರ್ಥ್ಯ ಗಳಿಸುವುದಾಗಿತ್ತು. ಗ್ರಹಗಳ ಅಧ್ಯಯನ, ಖಗೋಳಶಾಸ್ತ್ರ ಮತ್ತು ಬಾಹ್ಯಾಕಾಶ ಸಂಶೋಧನೆಯಲ್ಲಿ ಉನ್ನತ ಮಟ್ಟದ ಪ್ರಗತಿ ಸಾಧಿಸುವುದು ಹಾಗೂ ಅದನ್ನು ರಾಷ್ಟ್ರದ ಅಭಿವೃದ್ಧಿಗಾಗಿ, ಭದ್ರತೆಗಾಗಿ ಬಳಸುವುದು ಇಸ್ರೋದ ಉದ್ದೇಶವಾಗಿತ್ತು. ಅಲ್ಲಿಂದ ಇಲ್ಲಿಯವರೆಗೆ, ಏರಿಳಿತಗಳ ನಡುವೆಯೂ ಇಸ್ರೋ ಸಂಸ್ಥೆ ಉತ್ತಮವಾಗಿಯೇ ಕಾರ್ಯನಿರ್ವಹಿಸಿದೆ. ಜಾಗತಿಕ ಮಟ್ಟದಲ್ಲಿ ಗುರುತಿಸಿಕೊಂಡಿದೆ.

ಆದರೆ, 2019ರಲ್ಲಿ ನರೇಂದ್ರ ಮೋದಿಯವರು ಎರಡನೇ ಬಾರಿಗೆ ಪ್ರಧಾನಿಯಾಗುತ್ತಿದ್ದಂತೆ, ಅವರ ಆಪ್ತ ಉದ್ಯಮಿ ಗೌತಮ್ ಅದಾನಿ, ನ್ಯೂಸ್ಪೇಸ್ ಇಂಡಿಯಾ ಲಿಮಿಟೆಡ್() ಎಂಬ ಕಂಪನಿ ಆರಂಭಿಸಿದರು. 2020ರಲ್ಲಿ ಮೋದಿಯವರ ಸರ್ಕಾರ ಅಂತರಿಕ್ಷ ಕ್ಷೇತ್ರವನ್ನು ಖಾಸಗಿ ಕಂಪನಿಗಳಿಗೆ ತೆರೆಯುವ ನಿಟ್ಟಿನಲ್ಲಿ, - ಅನ್ನು ಖಾಸಗಿ ಕಂಪನಿಗಳಿಗೆ ಅನುಮತಿ, ಮಾರ್ಗದರ್ಶನ ಮತ್ತು ನಿಯಂತ್ರಣ ನೀಡುವ ಸಂಸ್ಥೆಯಾಗಿ ರೂಪಿಸಲಾಯಿತು. ಅದಕ್ಕೆ ಪೂರಕವಾಗಿ 2021ರ ಕೇಂದ್ರ ಬಜೆಟ್‌ನಲ್ಲಿ ಹೊಸ ಸಾರ್ವಜನಿಕ ವಲಯದ ಉದ್ಯಮ ನೀತಿ() ಘೋಷಿಸಿತು. ಆ ನೀತಿಯ ಪ್ರಕಾರ, ಪರಮಾಣು ಶಕ್ತಿ, ಬಾಹ್ಯಾಕಾಶ, ರಕ್ಷಣಾ, ಸಾರಿಗೆ, ದೂರಸಂಪರ್ಕ, ವಿದ್ಯುತ್, ಪೆಟ್ರೋಲಿಯಂ, ಕಲ್ಲಿದ್ದಲು, ಖನಿಜ, ಬ್ಯಾಂಕಿಂಗ್, ವಿಮೆ ಮತ್ತು ಹಣಕಾಸು ಸೇವಾ ಕ್ಷೇತ್ರಗಳಲ್ಲಿ ಖಾಸಗಿ ಸಹಭಾಗಿತ್ವಕ್ಕೆ ಬಾಗಿಲು ತೆರೆಯಿತು.

ಈ ನೀತಿಯ ಮುಂದುವರೆದ ಭಾಗವಾಗಿ, ಬಾಹ್ಯಾಕಾಶ ಕ್ಷೇತ್ರದಲ್ಲಿ ರಾಕೆಟ್, ಉಪಗ್ರಹ, ಉಡಾವಣಾ ಸೇವೆ, ಡೇಟಾ ಮತ್ತು ವಿವಿಧ ಅಂತರಿಕ್ಷ ಸೇವೆಗಳವರೆಗೆ ಖಾಸಗಿ ಕಂಪನಿಗಳಿಗೆ ಮುಕ್ತ ಅವಕಾಶ ನೀಡಲಾಯಿತು. ಆ ಮೂಲಕ ಮೋದಿಯವರ ಆಪ್ತ ಗೌತಮ್ ಅದಾನಿಯ ಎನ್‌ಎಸ್‌ಐಎಲ್ ಕಂಪನಿಗೆ ವಾಣಿಜ್ಯೀಕರಣ, ಉಡಾವಣಾ ಸೇವೆಗಳು ಮತ್ತು ಕೈಗಾರಿಕೆಯ ಮೂಲಕ / ಉತ್ಪಾದನೆಯಂತಹ ಮಹತ್ವದ ಜವಾಬ್ದಾರಿಗಳನ್ನು ನೀಡಲಾಯಿತು. ಈಗಾಗಲೇ ಸಣ್ಣ ಉಪಗ್ರಹ ಉಡಾವಣಾ ವಾಹನ() ತಂತ್ರಜ್ಞಾನವನ್ನು ಹಸ್ತಾಂತರಿಸಲಾಗಿದ್ದು, ಪಿಎಸ್‌ಎಲ್‌ವಿ ಮತ್ತು ಎಲ್‌ವಿಎಂ3 ಯೋಜನೆಗಳಿಗೂ ಇದು ವಿಸ್ತರಿಸುವ ಸೂಚನೆಗಳಿವೆ.

ಇಸ್ರೋ- ನೆಹರೂ ಮತ್ತು ವಿಕ್ರಮ್ ಸಾರಾಭಾಯಿಯವರ ಕನಸಿನ ಸಂಸ್ಥೆ. ಸುಮಾರು 60 ವರ್ಷಗಳ ಕಾಲ, ಭಾರತದ ಸಾವಿರಾರು ವಿಜ್ಞಾನಿಗಳ ಬುದ್ಧಿ, ಬೆವರು ಬಸಿದು ಬೆಳೆದ ಸಂಸ್ಥೆ. ಅತ್ಯಲ್ಪ ಸಂಪನ್ಮೂಲಗಳಿಂದ ಆರಂಭಿಸಿ ಚಂದ್ರಯಾನ, ಮಂಗಳಯಾನದಿಂದ ಹಿಡಿದು ಅತ್ಯಾಧುನಿಕ ಉಡಾವಣಾ ಸಾಮರ್ಥ್ಯದವರೆಗೆ ಸಾಗಿ ದೇಶದ ಕೀರ್ತಿಗೆ ಕಾರಣವಾದ ಸಂಸ್ಥೆ.

ರಾಕೆಟ್‌ಗಳ ವಿನ್ಯಾಸ, ನಿರ್ಮಾಣ, ಪರೀಕ್ಷೆ ಹಾಗೂ ಉಡಾವಣೆಗಳು ಕೇವಲ ತಯಾರಿಕಾ ಒಪ್ಪಂದಗಳಲ್ಲ; ಅವು ಸಂಸ್ಥೆಯ ಹಲವು ದಶಕಗಳ ಸಾವಿರಾರು ಸಾಧಕರ ಸಾಮರ್ಥ್ಯ ಹಾಗೂ ತಾಂತ್ರಿಕ ಜ್ಞಾನದ ಫಲ. ಆ ಜ್ಞಾನಸಂಪತ್ತು- ದೇಶದ ಜನಸಂಪತ್ತು- ಈಗ ಖಾಸಗಿ ಕಂಪನಿಗಳ ಕೈಗೆ ಸಿಗುವುದು ಎಷ್ಟು ಸರಿ? ಅದು ಇಸ್ರೋಗಷ್ಟೇ ಅಲ್ಲ, ರಾಷ್ಟ್ರೀಯ ಭದ್ರತೆಗೆ ಧಕ್ಕೆ ತರುವುದಿಲ್ಲವೇ? ಇದು ದೇಶದ್ರೋಹದ ಕೆಲಸವಲ್ಲವೇ?

ದೇಶವನ್ನಾಳಿದ ಈ ಹಿಂದಿನ ಸರ್ಕಾರಗಳು ಸಂಕಷ್ಟದಲ್ಲಿಯೂ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳನ್ನು, ಉದ್ದಿಮೆಗಳನ್ನು ಕಟ್ಟಿ ಬೆಳೆಸಿದ್ದವು. ಆದರೆ ಪ್ರಧಾನಿ ಮೋದಿಯವರು ಅವುಗಳನ್ನು ಮಾರುವುದಿಲ್ಲ ಎಂದು ಹೇಳುತ್ತಲೇ ಮಾರುತ್ತ ಬಂದರು. ಅದಕ್ಕೆ ಅತ್ಯುತ್ತಮ ಉದಾಹರಣೆಯಾಗಿ ಏರ್ ಇಂಡಿಯಾವನ್ನು ಟಾಟಾ ಸಮೂಹಕ್ಕೆ ಹಸ್ತಾಂತರಿಸಿದ್ದನ್ನು ನೋಡಬಹುದು. ಹಾಗೆಯೇ ದೆಹಲಿ ಸೇರಿ ಎಂಟು ವಿಮಾನ ನಿಲ್ದಾಣಗಳ ನಿರ್ವಹಣೆ ಮತ್ತು ಅಭಿವೃದ್ಧಿಯನ್ನು ಅದಾನಿ ಮತ್ತು ಜಿಎಂಆರ್ ಕಂಪನಿಗಳಿಗೆ ವಹಿಸಿದ್ದನ್ನು ಗಮನಿಸಬಹುದು. ಬಿಎಸ್‌ಎನ್‌ಎಲ್ ಹಾಗೂ ಎಂಟಿಎನ್‌ಎಲ್‌ಗಳನ್ನು ಅಂಬಾನಿ ಕಂಪನಿ ನಿಯಂತ್ರಣಕ್ಕೆ ವಹಿಸಿದ್ದನ್ನು; ರೈಲು ನಿಲ್ದಾಣಗಳ ಆಧುನೀಕರಣದ ನೆಪದಲ್ಲಿ ರೈಲುಗಳ ನಿರ್ವಹಣೆ ಹಾಗೂ ಕಂಟೇನರ್ ಸಾರಿಗೆಯನ್ನು ಖಾಸಗಿಯವರಿಗೆ ಕೊಟ್ಟಿದ್ದನ್ನು ಕಾಣಬಹುದು.

ಈಗ ಅದೇ ರೀತಿ ಇಸ್ರೋ ಖಾಸಗೀಕರಣ ಮಾಡುವುದಿಲ್ಲ ಎಂದು ಹೇಳುತ್ತಲೇ, ಖಾಸಗಿ ಸಹಭಾಗಿತ್ವ ಮತ್ತು ನವೋದ್ಯಮಗಳಿಗೆ ಅವಕಾಶ ಕಲ್ಪಿಸಲಾಗುತ್ತಿದೆ. ಈ ಅವಕಾಶ ಇಸ್ರೋ ಸಂಸ್ಥೆಯ ಅಭಿವೃದ್ಧಿಗಾಗಿ ಎಂದು ಸಮರ್ಥಿಸಿಕೊಳ್ಳಬಹುದು. ಆದರೆ, ಯಾವುದನ್ನು ಖಾಸಗಿಗೆ ಕೊಡಲಾಗುತ್ತಿದೆ, ಏಕೆ ಕೊಡಲಾಗುತ್ತಿದೆ, ಯಾವ ಬೆಲೆಗೆ ಕೊಡಲಾಗುತ್ತಿದೆ ಮತ್ತು ಭವಿಷ್ಯದಲ್ಲಿ ಇಸ್ರೋದ ಪಾತ್ರ ಏನಾಗಲಿದೆ ಎಂಬುದನ್ನು ಸರ್ಕಾರ ದೇಶದ ಜನತೆಯ ಮುಂದೆ ತೆರೆದಿಡಬೇಕು, ಸ್ಪಷ್ಟಪಡಿಸಬೇಕು.

ಏಕೆಂದರೆ, ಇಸ್ರೋ ಸಂಸ್ಥೆಯನ್ನು ಭಾರತದ ಸಾರ್ವಜನಿಕ ಹಣದಿಂದ ಕಟ್ಟಲಾಗಿದೆ. ಅದಕ್ಕೆ ಸಾವಿರಾರು ವಿಜ್ಞಾನಗಳ, ಅಧಿಕಾರಿಗಳ, ನೌಕರರ, ಸಿಬ್ಬಂದಿಗಳ ಹಲವು ದಶಕಗಳ ಶ್ರಮ ವಿನಿಯೋಗವಾಗಿದೆ. ಇಂದು ಪ್ರತಿಷ್ಠಿತ ಸಂಸ್ಥೆಯಾಗಿ ಹೊರಹೊಮ್ಮಿದೆ. ಇಂತಹ ಸದೃಢ ಇಸ್ರೋ ಸಂಸ್ಥೆಗೆ ಅಭಿವೃದ್ಧಿಯ ನೆಪದಲ್ಲಿ ಖಾಸಗಿ ಉದ್ಯಮಿಗಳನ್ನು ಆಹ್ವಾನಿಸುವುದು- ಭಾರತದ 60 ವರ್ಷಗಳ ಅಂತರಿಕ್ಷ ಸಾಮರ್ಥ್ಯದ ಲಾಭ ಅನಾಯಾಸವಾಗಿ ಅದಾನಿಗಳಂತಹ ಉದ್ಯಮಿಗಳ ಪಾಲಾದಂತೆ ಎನ್ನುವುದನ್ನು ದೇಶದ ಜನ ಅರ್ಥ ಮಾಡಿಕೊಳ್ಳಬೇಕಿದೆ. ಮೋದಿಯವರ ಮಾರಾಟ ಮಾಡುವ ಕೆಟ್ಟ ಚಾಳಿಗೆ ಕಡಿವಾಣ ಹಾಕಬೇಕಿದೆ.

ಜಾನುವಾರುಗಳಿಗೆ ಪೌಷ್ಟಿಕ ಮೇವು: 12,000 ಅಜೋಲಾ ಘಟಕ ಸ್ಥಾಪನೆಗೆ ತಯಾರಿ

ರಾಜ್ಯದಲ್ಲಿ ಜಾನುವಾರುಗಳಿಗೆ, ಅದರಲ್ಲೂ ವಿಶೇಷವಾಗಿ ಹಾಲು ನೀಡುವ ದನ-ಕರುಗಳಿಗೆ ಸ್ಥಳೀಯವಾಗಿಯೇ ಪೌಷ್ಟಿಕ ಪೂರಕ ಮೇವನ್ನು ಒದಗಿಸುವ ಸಲುವಾಗಿ, ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವೆಗಳ ಇಲಾಖೆಯು ಅಜೋಲಾ ಉತ್ಪಾದನಾ ಘಟಕಗಳನ್ನು ಉತ್ತೇಜಿಸಲು ಮಹತ್ವದ ಯೋಜನೆ ಹಮ್ಮಿಕೊಂಡಿದೆ. ಮಳೆಯ ಅಭಾವ, ಹಸಿರು ಮೇವಿನ ಕೊರತೆಗಳು ಉಂಟಾದಾಗ ಪ್ರೋಟೀನ್, ಖನಿಜಾಂಶಗಳು ಸೇರಿದಂತೆ ಉತ್ತಮ ಪೌಷ್ಟಿಕಾಂಶಗಳನ್ನು ಹೊಂದಿರುವ ಅಜೋಲಾವನ್ನು ಪೂರಕ ಆಹಾರವಾಗಿ ಬಳಸಬಹುದಾಗಿದೆ.



ಈ ಯೋಜನೆಯಡಿ ರಾಜ್ಯದ ಎಲ್ಲಾ 31 ಜಿಲ್ಲೆಗಳ 240 ತಾಲ್ಲೂಕುಗಳಲ್ಲಿ ಒಟ್ಟು 3,78,00,000 ರೂಪಾಯಿಗಳ ವೆಚ್ಚದಲ್ಲಿ 12,000 ಅಜೋಲಾ ಉತ್ಪಾದನಾ ಘಟಕಗಳನ್ನು ಸ್ಥಾಪಿಸಲು, ಜಿಲ್ಲಾವಾರು ಭೌತಿಕ ಮತ್ತು ಆರ್ಥಿಕ ಗುರಿಯನ್ನು ನಿಗದಿಪಡಿಸಲಾಗಿದೆ. ಪ್ರತಿ ಘಟಕ ಸ್ಥಾಪನೆಗೆ ಅಂದಾಜು 3,150 ರೂಪಾಯಿ ವೆಚ್ಚವಾಗಲಿದೆ.

ಬೆಳಗಾವಿ ಜಿಲ್ಲೆಯಲ್ಲಿ 15 ತಾಲ್ಲೂಕುಗಳಿದ್ದು 750 ಘಟಕಗಳಿಗೆ 23,62,500 ರೂಪಾಯಿ ನಿಗದಿಪಡಿಸಲಾಗಿದೆ. ವಿಜಯಪುರ ಜಿಲ್ಲೆಯ 13 ತಾಲ್ಲೂಕುಗಳಿಗೆ 650 ಘಟಕಗಳಿಗೆ 20,47,500 ರೂಪಾಯಿ ಹಾಗೂ ಉತ್ತರ ಕನ್ನಡ ಜಿಲ್ಲೆಯ 12 ತಾಲ್ಲೂಕುಗಳಿಗೆ 600 ಘಟಕಗಳಿಗೆ 18,90,000 ರೂಪಾಯಿ ವೆಚ್ಚ ಮಾಡಲು ನಿರ್ಧರಿಸಲಾಗಿದೆ. ಕಲಬುರಗಿ ಜಿಲ್ಲೆಯ 11 ತಾಲ್ಲೂಕುಗಳಿಗೆ 550 ಘಟಕಗಳಿಗಾಗಿ 17,32,500 ರೂಪಾಯಿ ವೆಚ್ಚವಾಗಲಿದೆ.

ಬಾಗಲಕೋಟೆ ಜಿಲ್ಲೆಯ 10 ತಾಲ್ಲೂಕು ಮತ್ತು ತುಮಕೂರು ಜಿಲ್ಲೆಯ 10 ತಾಲ್ಲೂಕುಗಳಿಗೆ ತಲಾ 500 ಘಟಕಗಳಂತೆ ತಲಾ 15,75,000 ರೂಪಾಯಿಗಳನ್ನು ನಿಗದಿಗೊಳಿಸಲಾಗಿದೆ. ಚಿಕ್ಕಮಗಳೂರು ಜಿಲ್ಲೆಯ 9 ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆಯ 9 ತಾಲ್ಲೂಕು ಹಾಗೂ ಮೈಸೂರು ಜಿಲ್ಲೆಯ 9 ತಾಲ್ಲೂಕುಗಳಿಗೆ ತಲಾ 450 ಘಟಕಗಳನ್ನು ಸ್ಥಾಪಿಸಲು ತಲಾ 14,17,500 ರೂಪಾಯಿ ಕಾಯ್ದಿರಿಸಲಾಗಿದೆ.

ಬೀದರ್ ಜಿಲ್ಲೆಯ 8 ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆಯ 8 ತಾಲ್ಲೂಕು, ಧಾರವಾಡ ಜಿಲ್ಲೆಯ 8 ತಾಲ್ಲೂಕು, ಹಾಸನ ಜಿಲ್ಲೆಯ 8 ತಾಲ್ಲೂಕು, ಹಾವೇರಿ ಜಿಲ್ಲೆಯ 8 ತಾಲ್ಲೂಕು ಮತ್ತು ರಾಯಚೂರು ಜಿಲ್ಲೆಯ 8 ತಾಲ್ಲೂಕುಗಳಿಗೆ ತಲಾ 400 ಘಟಕಗಳನ್ನು ಹಂಚಿಕೆ ಮಾಡಲಾಗಿದ್ದು, ಪ್ರತಿಯೊಂದು ಜಿಲ್ಲೆಗೆ ತಲಾ 12,60,000 ರೂಪಾಯಿ ಅನುದಾನ ನೀಡಲಾಗಿದೆ.

ಗದಗ ಜಿಲ್ಲೆಯ 7 ತಾಲ್ಲೂಕು, ಕೊಪ್ಪಳ ಜಿಲ್ಲೆಯ 7 ತಾಲ್ಲೂಕು, ಮಂಡ್ಯ ಜಿಲ್ಲೆಯ 7 ತಾಲ್ಲೂಕು, ಶಿವಮೊಗ್ಗ ಜಿಲ್ಲೆಯ 7 ತಾಲ್ಲೂಕು ಮತ್ತು ಉಡುಪಿ ಜಿಲ್ಲೆಯ 7 ತಾಲ್ಲೂಕುಗಳಿಗೆ ತಲಾ 350 ಘಟಕಗಳಿಗೆ ತಲಾ 11,02,500 ರೂಪಾಯಿಗಳನ್ನು ನಿಗದಿಪಡಿಸಲಾಗಿದೆ.

ಚಿತ್ರದುರ್ಗ ಜಿಲ್ಲೆಯ 6 ತಾಲ್ಲೂಕು, ದಾವಣಗೆರೆ ಜಿಲ್ಲೆಯ 6 ತಾಲ್ಲೂಕು, ಕೋಲಾರ ಜಿಲ್ಲೆಯ 6 ತಾಲ್ಲೂಕು, ವಿಜಯನಗರ ಜಿಲ್ಲೆಯ 6 ತಾಲ್ಲೂಕು ಹಾಗೂ ಯಾದಗಿರಿ ಜಿಲ್ಲೆಯ 6 ತಾಲ್ಲೂಕುಗಳಿಗೆ ತಲಾ 300 ಘಟಕಗಳ ಗುರಿ ನೀಡಲಾಗಿದ್ದು, ತಲಾ 9,45,000 ರೂಪಾಯಿ ವೆಚ್ಚವಾಗಲಿದೆ.

ಬೆಂಗಳೂರು ನಗರ ಜಿಲ್ಲೆಯ 5 ತಾಲ್ಲೂಕು, ಬಳ್ಳಾರಿ ಜಿಲ್ಲೆಯ 5 ತಾಲ್ಲೂಕು, ಚಾಮರಾಜನಗರ ಜಿಲ್ಲೆಯ 5 ತಾಲ್ಲೂಕು, ಕೊಡಗು ಜಿಲ್ಲೆಯ 5 ತಾಲ್ಲೂಕು ಮತ್ತು ರಾಮನಗರ 5 ತಾಲ್ಲೂಕುಗಳಿಗೆ ತಲಾ 250 ಘಟಕ ಸ್ಥಾಪನೆಗೆ ತಲಾ 7,87,500 ರೂಪಾಯಿ ನೀಡಲಾಗುತ್ತಿದ್ದು, ಬೆಂಗಳೂರು ಗ್ರಾಮಾಂತರ ಜಿಲ್ಲೆಯ 4 ತಾಲ್ಲೂಕುಗಳಿಗೆ 200 ಘಟಕ ಸ್ಥಾಪಿಸಲು 6,30,000 ರೂಪಾಯಿ ವೆಚ್ಚ ಮಾಡಲಾಗುವುದು.

ತಾಂತ್ರಿಕ ಹಾಗೂ ವೆಚ್ಚದ ವಿವರ: ಈ ಅಜೋಲಾ ಘಟಕಗಳನ್ನು ರೈತರ ಮನೆ ಅಥವಾ ಕೊಟ್ಟಿಗೆಯ ಸಮೀಪವೇ ಕಡಿಮೆ ಸ್ಥಳದಲ್ಲಿ ನಿರ್ಮಿಸಬಹುದಾಗಿದೆ. ಸುಮಾರು 10 ಅಡಿ ಉದ್ದ, 4 ಅಡಿ ಅಗಲ ಹಾಗೂ 1 ಅಡಿ ಆಳದ (2.60 ಮೀ. 1.60 ಮೀ.) ಅಳತೆಯಲ್ಲಿ ಘಟಕವನ್ನು ನಿರ್ಮಿಸಲಾಗುತ್ತದೆ.

ಪ್ರತಿ ಘಟಕದ ಒಟ್ಟು ವೆಚ್ಚವಾದ 3,150 ರೂಪಾಯಿ ಯಲ್ಲಿ ಸಾಮಗ್ರಿ ಹಾಗೂ ಕೂಲಿ ವೆಚ್ಚ ಸೇರಿದೆ. ಯುವಿ-ಸ್ಟೆಬಿಲೈಸ್ಡ್ ಎಚ್‌ಡಿಪಿಇ ಶೀಟ್ (450 , 10 6 ಅಡಿ) 1,350 ರೂಪಾಯಿ

ಶೇಕಡಾ 80 ರಷ್ಟು ನೆರಳು ಬಲೆ ಮತ್ತು ಬಿದಿರು/ಜಿಐ ಫ್ರೇಮ್ -650 ರೂಪಾಯಿ

ಫಲವತ್ತಾದ ಮಣ್ಣು, ಸಗಣಿ ಮತ್ತು ಸೂಪರ್ ಫಾಸ್ಫೇಟ್ ಮಿಶ್ರಣ - 250 ರೂಪಾಯಿ

ಅಜೋಲಾ ತಳಿ/ಬೀಜ (/) 2 ಕೆಜಿ - 200 ರೂಪಾಯಿ

(ಸಾಮಗ್ರಿಗಳ ಒಟ್ಟು ವೆಚ್ಚ: 2,450 ರೂಪಾಯಿ)

ಸ್ಥಳ ಸಿದ್ಧತೆ, ತೊಟ್ಟಿ ಅಳವಡಿಕೆ, ಸಂರಕ್ಷಣೆ ಮತ್ತು ಬೀಜ ಬಿತ್ತನೆ ಕೆಲಸಕ್ಕಾಗಿ 2 ಮಾನವ ದಿನಗಳ ಕೂಲಿ ವೆಚ್ಚ (ದರ ದಿನಕ್ಕೆ 350 ರೂ. ನಂತೆ) 700 ರೂಪಾಯಿ.

ಅನುಷ್ಠಾನ ಮತ್ತು ಮಾರ್ಗದರ್ಶಿ ಸೂತ್ರಗಳು: ಜಿಲ್ಲೆಗೆ ನಿಗದಿಪಡಿಸಿದ ಗುರಿಯನ್ನು ತಾಲ್ಲೂಕು ಮತ್ತು ಗ್ರಾಮ ಪಂಚಾಯಿತಿವಾರು ಹಂಚಿಕೆ ಮಾಡಿ, ಸೂಕ್ತ ಸ್ಥಳ ಮತ್ತು ನೀರಿನ ಲಭ್ಯತೆ ಇರುವ ಜಾನುವಾರು ಸಾಕಣೆದಾರರನ್ನು ಆದ್ಯತೆಯ ಮೇಲೆ ಆಯ್ಕೆ ಮಾಡಲಾಗುವುದು. ಕಲುಷಿತ ನೀರಿನಲ್ಲಿ ಅಜೋಲಾ ಬೆಳೆಸಿದರೆ ಮಾಲಿನ್ಯಕಾರಕಗಳ ಅಪಾಯವಿರುವುದರಿಂದ ಕೇವಲ ಸ್ವಚ್ಛ ನೀರು ಲಭ್ಯವಿರುವ ಸ್ಥಳಗಳನ್ನಷ್ಟೇ ಆಯ್ಕೆ ಮಾಡಲಾಗುತ್ತದೆ. ಫಲಾನುಭವಿಗಳಿಗೆ ಅಜೋಲಾ ಉತ್ಪಾದನೆ, ಕೊಯ್ಲು, ಸ್ವಚ್ಛತೆ, ಸಂಸ್ಕರಣೆ ಹಾಗೂ ಜಾನುವಾರುಗಳಿಗೆ ನೀಡುವ ಕುರಿತು ತಾಂತ್ರಿಕ ತರಬೇತಿ ನೀಡಲಾಗುತ್ತದೆ.

''ಈ ಯೋಜನೆಯನ್ನು - ಮಾರ್ಗಸೂಚಿಗಳು ಹಾಗೂ ಗ್ರಾಮ ಪಂಚಾಯಿತಿ ಅಭಿವೃದ್ಧಿ ಯೋಜನೆಗೊಳಪಟ್ಟು ಅನುಷ್ಠಾನಗೊಳಿಸಲಾಗುತ್ತದೆ. ಪ್ರತಿಯೊಂದು ಘಟಕದ ಫಲಾನುಭವಿಯ ವಿವರಗಳು, ಆಧಾರ ಜಿಪಿಎಸ್ ಸ್ಥಳ , ಕಾರ್ಯನಿರ್ವಹಣೆಯ ಮೊದಲು ಮತ್ತು ನಂತರದ ಛಾಯಾಚಿತ್ರಗಳನ್ನು ಕಡ್ಡಾಯವಾಗಿ ದಾಖಲಿಸಲಾಗುತ್ತದೆ. ಜಿಲ್ಲಾ ಉಪ ನಿರ್ದೇಶಕರು ಮಾಸಿಕ ವೇಳಾಪಟ್ಟಿ ಸಿದ್ಧಪಡಿಸಿ ಅನುಷ್ಠಾನಗೊಳಿಸಲಿದ್ದು, ಪ್ರತಿ ತಿಂಗಳ 5ನೇ ತಾರೀಖಿನೊಳಗೆ ಪ್ರಗತಿ ವರದಿಯನ್ನು ರಾಜ್ಯ ಕಚೇರಿಗೆ ಸಲ್ಲಿಸಬೇಕು'' ಎಂದು'' ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವೆಗಳ ಇಲಾಖೆಯ ಆಯುಕ್ತರು ತಿಳಿಸಿದ್ದಾರೆ.

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ (ಕೋಡಿಹಳ್ಳಿ ಚಂದ್ರಶೇಖರ) ರೈತ ಮುಖಂಡರು ಚಂ. ಸು. ಪಾಟೀಲ್ ಮಾತನಾಡಿ, ''ಅಜೋಲಾ ಘಟಕಗಳನ್ನು ಸ್ಥಾಪನೆ ಮಾಡುವುದರಿಂದ ಹಳ್ಳಿಗಳಲ್ಲಿ ಹೈನುಗಾರಿಕೆ ಮಾಡುತ್ತಿರುವ ರೈತರಿಗೆ ಹೆಚ್ಚು ಅನುಕೂಲವಾಗಲಿದೆ. ಅನರ್ಹರಿಗೆ ಸಿಗದ ಹಾಗೆ ನೋಡಿಕೊಂಡು, ನೈಜ ಫಲಾನುಭವಿಗಳನ್ನು ಆಯ್ಕೆ ಮಾಡಿ ಅವರಿಗೆ ಅಜೋಲಾ ಘಟಕಗಳನ್ನು ಸ್ಥಾಪನೆ ಮಾಡಲು ಅವಕಾಶ ಕೊಡಬೇಕು. ದನ-ಕರುಗಳಿಗೆ ಅಜೋಲಾ ಪೌಷ್ಠಿಕ ಆಹಾರ ಕೊಡುವುದರ ಮೂಲಕ ಹಾಲು ಉತ್ಪನ್ನ ಹೆಚ್ಚಾಗುತ್ತದೆ. ಹಾಗೆ ಗೊಬ್ಬರ ಬಳಕೆ ಮಾಡಲು ಹೆಚ್ಚು ಅನುಕೂಲ ಆಗಲಿದೆ'' ಎಂದು ಹೇಳಿದರು.

ನ್ಯಾಯಾಂಗ ನಿಂದನೆ, ನಾಗರಿಕ ಹಕ್ಕುಗಳ ದಮನ: ಐಎಎಸ್ ಅಧಿಕಾರಿ ಮೇಧಾ ರೂಪಂ ಆಡಳಿತದ ಕರಾಳ ಮುಖ ಅನಾವರಣ

ಸುಳ್ಳು ಪೊಲೀಸ್ ದಾಖಲೆಗಳ ಸೃಷ್ಟಿಗೆ ಕುಮ್ಮಕ್ಕು ನೀಡುವುದು, ಭಿನ್ನಮತವನ್ನು ಹತ್ತಿಕ್ಕಲು ರಾಷ್ಟ್ರೀಯ ಭದ್ರತಾ ಕಾಯ್ದೆಯನ್ನು ರಾಜಕೀಯ ಅಸ್ತ್ರವಾಗಿ ಬಳಸುವುದು ಮತ್ತು ನ್ಯಾಯಾಲಯದ ಆದೇಶಗಳನ್ನು ಕಡೆಗಣಿಸುವುದು ಮೇಧಾ ರೂಪಂ ಅವರ ಆಡಳಿತದ ಕಾರ್ಯವಿಧಾನವಾಗಿ ಬದಲಾಗಿದೆ. ಉನ್ನತ ಸಾಂವಿಧಾನಿಕ ಹುದ್ದೆಯಲ್ಲಿರುವ ಗ್ಯಾನೇಶ್ ಕುಮಾರ್ ಅವರ ಪುತ್ರಿಯ ಈ ಸರ್ವಾಧಿಕಾರಿ ನಡೆಗಳು, ಪ್ರಜಾಪ್ರಭುತ್ವ ವ್ಯವಸ್ಥೆಯು ಹೇಗೆ ಸಂವಿಧಾನದ ಮೂಲ ಆಶಯಗಳಿಂದ ವಿಮುಖವಾಗುತ್ತಿದೆ ಎಂಬುದರ ಅಪಾಯಕಾರಿ ಮುನ್ಸೂಚನೆಯಾಗಿದೆ.

ಕೇಂದ್ರ ಮುಖ್ಯ ಚುನಾವಣಾ ಆಯುಕ್ತ (ಸಿಇಸಿ) ಗ್ಯಾನೇಶ್ ಕುಮಾರ್ ಅವರ ಪುತ್ರಿಯೂ ಆಗಿರುವ, ಉತ್ತರ ಪ್ರದೇಶದ ಗೌತಮ್ ಬುದ್ಧ ನಗರದ (ನೋಯ್ಡಾ) ಜಿಲ್ಲಾಧಿಕಾರಿ, ಐಎಎಸ್ ಅಧಿಕಾರಿ ಮೇಧಾ ರೂಪಂ ಅವರ ಆಡಳಿತ ವೈಖರಿಯು ಇದೀಗ ವ್ಯಾಪಕ ಟೀಕೆಗೆ ಗುರಿಯಾಗಿದೆ. ನಾಗರಿಕರ ಸಾಂವಿಧಾನಿಕ ಹಕ್ಕುಗಳನ್ನು ಹತ್ತಿಕ್ಕುವ ಅವರ ನೀತಿಗಳು, ಕರಾಳ ಶಾಸನಗಳ ಯಥೇಚ್ಛ ದುರ್ಬಳಕೆ ಹಾಗೂ ನ್ಯಾಯಾಂಗ ವ್ಯವಸ್ಥೆಯನ್ನೇ ಕಡೆಗಣಿಸುವ ಸರ್ವಾಧಿಕಾರಿ ಧೋರಣೆಯನ್ನು ಅಲಹಾಬಾದ್ ಹೈಕೋರ್ಟ್ ಇತ್ತೀಚಿನ ತನ್ನ ತೀರ್ಪುಗಳಲ್ಲಿ ಎಳೆಎಳೆಯಾಗಿ ಬಿಚ್ಚಿಟ್ಟಿದೆ. ಅವರ ಸಂವಿಧಾನ ವಿರೋಧಿ ನಡೆಗಳನ್ನು ನಿಖರವಾದ ದಿನಾಂಕ ಮತ್ತು ಸಾಕ್ಷ್ಯಾಧಾರಗಳ ಸಮೇತ ನ್ಯಾಯಾಲಯವು ತೀವ್ರವಾಗಿ ಖಂಡಿಸಿದೆ.

ಈ ಸಾಂವಿಧಾನಿಕ ಬಿಕ್ಕಟ್ಟಿನ ಪ್ರಮುಖ ನಿದರ್ಶನವಾಗಿ 2026ರ ಏಪ್ರಿಲ್‌ನಲ್ಲಿ ನೋಯ್ಡಾದಲ್ಲಿ ನಡೆದ ಕಾರ್ಮಿಕರ ಮುಷ್ಕರ ಪ್ರಕರಣವನ್ನು ನ್ಯಾಯಾಲಯ ಗಂಭೀರವಾಗಿ ಪರಿಗಣಿಸಿದೆ. ಕನಿಷ್ಠ ವೇತನ ಮತ್ತು ಮಾನವೀಯ ಕೆಲಸದ ಅವಧಿಗಾಗಿ ಕಾರ್ಮಿಕರು ನಡೆಸಿದ ಸಾಂವಿಧಾನಿಕ ಹಾಗೂ ಶಾಂತಿಯುತ ಪ್ರತಿಭಟನೆಗೆ ದೆಹಲಿ ವಿಶ್ವವಿದ್ಯಾಲಯದ ವಿದ್ಯಾರ್ಥಿನಿ ಆಕೃತಿ ಚೌಧರಿ ಬೆಂಬಲ ನೀಡಿದ್ದರು. ಕೇವಲ ಅಭಿವ್ಯಕ್ತಿ ಸ್ವಾತಂತ್ರ್ಯವನ್ನು ಚಲಾಯಿಸಿದ ಕಾರಣಕ್ಕಾಗಿ ಅವರ ಮೇಲೆ ರಾಷ್ಟ್ರೀಯ ಭದ್ರತಾ ಕಾಯ್ದೆ () ಯಂತಹ ಕಠಿಣ ಮುನ್ನೆಚ್ಚರಿಕಾ ಬಂಧನ ಕಾಯ್ದೆಯನ್ನು ಜಿಲ್ಲಾಧಿಕಾರಿ ಮೇಧಾ ರೂಪಂ ಪ್ರಯೋಗಿಸಿದ್ದರು. ಇದು ಭಾರತೀಯ ಸಂವಿಧಾನದ 21ನೇ ವಿಧಿಯು ಖಾತರಿಪಡಿಸಿರುವ ಜೀವ ಮತ್ತು ವೈಯಕ್ತಿಕ ಸ್ವಾತಂತ್ರ್ಯದ ಹಕ್ಕಿನ ಸ್ಪಷ್ಟ ಉಲ್ಲಂಘನೆ ಎಂದು ಸೆಪ್ಟೆಂಬರ್ 2ರಂದು ನೀಡಿದ ತೀರ್ಪಿನಲ್ಲಿ ಹೈಕೋರ್ಟ್ ತಿಳಿಸಿದೆ.

ಯಾವುದೇ ವಿಶ್ವಾಸಾರ್ಹ ಸಾಕ್ಷ್ಯಾಧಾರಗಳಿಲ್ಲದೆ, ಕೇವಲ ಊಹಾಪೋಹ ಮತ್ತು ರಾಜಕೀಯ ಪೂರ್ವಾಗ್ರಹಗಳ ಆಧಾರದ ಮೇಲೆ ರಾಷ್ಟ್ರೀಯ ಭದ್ರತಾ ಕಾಯ್ದೆಯನ್ನು ಜಾರಿಗೊಳಿಸಿದ ಜಿಲ್ಲಾಧಿಕಾರಿಯ ನೀತಿಯನ್ನು ಹೈಕೋರ್ಟ್ ವಿಭಾಗೀಯ ಪೀಠವು ತೀವ್ರ ತಿರಸ್ಕಾರಾರ್ಹ ( ) ಎಂದು ಹೇಳಿದೆ. ಶಾಂತಿಯುತ ಪ್ರತಿಭಟನೆಯು ಸಂವಿಧಾನದ 19ನೇ ವಿಧಿಯಡಿ ಬರುವ ಮೂಲಭೂತ ಹಕ್ಕು. ಆದರೆ, ಕಾರ್ಮಿಕರ ಪರವಾಗಿ ಧ್ವನಿ ಎತ್ತುವ ಇತರರನ್ನು ಹೆದರಿಸುವ ದುರುದ್ದೇಶದಿಂದಲೇ ಆಕೃತಿ ಚೌಧರಿಯನ್ನು ಸಾರ್ವಜನಿಕವಾಗಿ ಒಂದು ಉದಾಹರಣೆಯನ್ನಾಗಿ ಮಾಡಲು ಜಿಲ್ಲಾಧಿಕಾರಿ ಮುಂದಾಗಿದ್ದರು. ಇದು ಆಡಳಿತ ಯಂತ್ರದ ಸಂವಿಧಾನ ವಿರೋಧಿ ಮನಸ್ಥಿತಿಗೆ ಕನ್ನಡಿ ಹಿಡಿದಿದೆ ಎಂದು ನ್ಯಾಯಮೂರ್ತಿಗಳಾದ ಅತುಲ್ ಶ್ರೀಧರನ್ ಮತ್ತು ಅಚಲ್ ಸಚ್‌ದೇವ್ ಅವರ ಪೀಠವು ಆಕ್ರೋಶ ವ್ಯಕ್ತಪಡಿಸಿದೆ.

ಅಧಿಕಾರಿಗಳ ನಿಷ್ಠೆ ಮತ್ತು ಜವಾಬ್ದಾರಿಯ ಕುರಿತು ತೀರ್ಪಿನಲ್ಲಿ ಉಲ್ಲೇಖಿಸಿರುವ ಅಂಶಗಳು ಭಾರತೀಯ ಆಡಳಿತ ವ್ಯವಸ್ಥೆಗೆ



ಒಂದು ಗಂಭೀರ ಎಚ್ಚರಿಕೆಯಾಗಿವೆ. ''ಅಧಿಕಾರಿಗಳ ನಿಷ್ಠೆ ಇರಬೇಕಾದ್ದು ಭಾರತದ ಸಂವಿಧಾನಕ್ಕೆ ಹೊರತು, ರಾಜಕೀಯ ಕಾರ್ಯಾಂಗಕ್ಕಲ್ಲ'' ಎಂದು ಹೈಕೋರ್ಟ್ ಕಟ್ಟುನಿಟ್ಟಾಗಿ ಹೇಳಿದೆ. ಜನರೇ ನಿಜವಾದ ಯಜಮಾನರು ಹಾಗೂ ಅಧಿಕಾರಿಗಳು ಕೇವಲ ಸಾರ್ವಜನಿಕ ಸೇವಕರು. ಆದರೆ, ಮೇಧಾ ರೂಪಂ ಅವರು ತಮ್ಮ ಅಧಿಕಾರದ ಅವಧಿಯಲ್ಲಿ ಸಂವಿಧಾನಕ್ಕೆ ತಾನು ಮಾಡಿದ ಪ್ರಮಾಣವಚನದ ನಿಷ್ಠೆಯನ್ನೇ ಉಲ್ಲಂಘಿಸಿದ್ದಾರೆ ( ) ಎಂದು ನ್ಯಾಯಾಲಯ ತನ್ನ ತೀರ್ಪಿನಲ್ಲಿ ದಾಖಲಿಸಿದೆ.

ಜಿಲ್ಲಾಧಿಕಾರಿಯ ಇಂತಹ ದರ್ಪದ ವರ್ತನೆಗಳು ( ) ಹೀಗೆಯೇ ಮುಂದುವರಿದರೆ, ಭವಿಷ್ಯದಲ್ಲಿ ಉತ್ತರ ಪ್ರದೇಶ ರಾಜ್ಯವು ಆರ್ವೆಲಿಯನ್ ಡಿಸ್ಟೋಪಿಯಾ (ಪ್ರಜೆಗಳ ಮೇಲೆ ಸಂಪೂರ್ಣ ನಿಯಂತ್ರಣ ಸಾಧಿಸುವ ಸರ್ವಾಧಿಕಾರಿ ವ್ಯವಸ್ಥೆ) ಆಗಿ ಪರಿವರ್ತನೆಯಾಗಲಿದೆ ಎಂದು ನ್ಯಾಯಾಲಯ ಎಚ್ಚರಿಸಿದೆ. ಅಧಿಕಾರಶಾಹಿಯು ನಾಗರಿಕ ಹಕ್ಕುಗಳನ್ನು ಹತ್ತಿಕ್ಕಲು ಕರಾಳ ಕಾನೂನುಗಳನ್ನು ಅಸ್ತ್ರವಾಗಿ ಬಳಸಿಕೊಂಡರೆ, ಮುಂಬರುವ ದಿನಗಳಲ್ಲಿ ಪ್ರಜೆಗಳು ಇಂತಹ ಅಧಿಕಾರಿಗಳನ್ನು ವಸಾಹತುಶಾಹಿ ಆಡಳಿತದ ದಬ್ಬಾಳಿಕೆಯ ಪ್ರತೀಕವಾಗಿ ನೋಡಬೇಕಾಗುತ್ತದೆ ಎಂದು ತೀವ್ರ ಕಳವಳ ವ್ಯಕ್ತಪಡಿಸಿದೆ.

ನ್ಯಾಯಾಲಯವು ಕೇವಲ ಬಂಧನ ಆದೇಶವನ್ನು ರದ್ದುಪಡಿಸಿ ಸುಮ್ಮನಾಗದೆ, ಅಕ್ರಮ ಬಂಧನಕ್ಕೆ ಒಳಗಾದ ಸಂತ್ರಸ್ತೆಗೆ 5 ಲಕ್ಷ ರೂ. ಪರಿಹಾರವನ್ನು ನೀಡುವಂತೆ ಆದೇಶಿಸಿದೆ. ಮುಖ್ಯವಾಗಿ, ಈ ಹಣವನ್ನು ಸರ್ಕಾರದ ಬೊಕ್ಕಸದಿಂದ ಭರಿಸದೆ, ಖುದ್ದು ಜಿಲ್ಲಾಧಿಕಾರಿ ಮೇಧಾ ರೂಪಂ ಮತ್ತು ನಕಲಿ ವರದಿ ಸಿದ್ಧಪಡಿಸಿದ ಪೊಲೀಸ್ ಠಾಣಾಧಿಕಾರಿಯ () ವೈಯಕ್ತಿಕ ವೇತನದಿಂದಲೇ ವಸೂಲಿ ಮಾಡುವಂತೆ ಸೂಚಿಸಿದೆ. ಜೊತೆಗೆ, ಈ ಅಧಿಕಾರಿಗಳ ಸೇವಾ ದಾಖಲಾತಿಯಲ್ಲಿ ( ) ನ್ಯಾಯಾಲಯದ ಈ ಅಸಮಾಧಾನವನ್ನು ಕಡ್ಡಾಯವಾಗಿ ನಮೂದಿಸಲು ಆದೇಶಿಸಿರುವುದು ಇವರ ಆಡಳಿತ ವೈಫಲ್ಯಕ್ಕೆ ಹಿಡಿದ ಕನ್ನಡಿಯಾಗಿದೆ.

ಮೇಧಾ ರೂಪಂ ಅವರ ಸಂವಿಧಾನ ವಿರೋಧಿ ನೀತಿಗಳು ಕೇವಲ ಒಂದು ಪ್ರಕರಣಕ್ಕೆ ಸೀಮಿತವಾಗಿಲ್ಲ. ಇದೇ ಕಾರ್ಮಿಕರ ಪ್ರತಿಭಟನೆಗೆ ಸಂಬಂಧಿಸಿದಂತೆ ಹಿರಿಯ ಪತ್ರಕರ್ತ ಸತ್ಯಂ ವರ್ಮಾ ಅವರ ಮೇಲೂ ಎನ್‌ಎಸ್‌ಎ ಅಸ್ತ್ರವನ್ನು ಪ್ರಯೋಗಿಸಲಾಗಿದೆ. 2026ರ ಮೇ 12ರಂದು ಮೇಧಾ ರೂಪಂ ಅವರು ಎನ್‌ಎಸ್‌ಎ ಬಂಧನಕ್ಕೆ ಅಧಿಕೃತ ಅನುಮೋದನೆ ನೀಡಿದ್ದರು. ಆಘಾತಕಾರಿ ವಿಚಾರವೆಂದರೆ, ಸತ್ಯಂ ವರ್ಮಾ ವಿರುದ್ಧದ 170 ಪುಟಗಳ ಎನ್‌ಎಸ್‌ಎ ಕಡತವನ್ನು () ಸಿದ್ಧಪಡಿಸಲು ಬಲಪಂಥೀಯ ಟ್ವಿಟರ್ ಖಾತೆಗಳ ಪೋಸ್ಟ್‌ಗಳನ್ನು ಪದಶಃ ನಕಲು ಮಾಡಲಾಗಿತ್ತು.

ಸತ್ಯಂ ವರ್ಮಾ ಅವರ ಕಡತದಲ್ಲಿ, 2024ರಲ್ಲಿ ನಡೆದ ಪ್ಯಾಲೆಸ್ತೀನ್ ಪರವಾದ ಸಭೆ ಸೇರಿದಂತೆ ಸಂಪೂರ್ಣ ಕಾನೂನುಬದ್ಧವಾದ ರಾಜಕೀಯ ಕಾರ್ಯಕ್ರಮಗಳನ್ನು ''ಭಾರತೀಯ ಆಡಳಿತದ ವಿರುದ್ಧದ ಕ್ರಾಂತಿ'' ಎಂದು ತಿರುಚಲಾಗಿತ್ತು. ಇಂತಹ ನಕಲಿ ಕಡತಗಳಿಗೆ ಕಣ್ಣುಮುಚ್ಚಿ ಅನುಮೋದನೆ ನೀಡುವ ಮೂಲಕ, ಜಿಲ್ಲಾಧಿಕಾರಿಯು ಸಂವಿಧಾನದ 19ನೇ ವಿಧಿಯು ನೀಡುವ ಅಭಿವ್ಯಕ್ತಿ ಮತ್ತು ಸಂಘಟನಾ ಸ್ವಾತಂತ್ರ್ಯದ ಕಗ್ಗೊಲೆಗೆ ನೇರ ಕಾರಣರಾಗಿದ್ದಾರೆ ಎಂಬುದು ಸ್ಪಷ್ಟವಾಗಿದೆ.

ನಾಗರಿಕರ ಹಕ್ಕುಗಳ ಉಲ್ಲಂಘನೆಯ ಜೊತೆಗೆ, ಸಾಂವಿಧಾನಿಕ ಸಂಸ್ಥೆಯಾದ ನ್ಯಾಯಾಂಗದ ಆದೇಶಗಳ ಬಗ್ಗೆಯೂ ಮೇಧಾ ರೂಪಂ ತೀವ್ರ ನಿರ್ಲಕ್ಷ್ಯ ತೋರಿದ್ದಾರೆ. ಮಹೇಂದ್ರ ದತ್ ಶರ್ಮಾ ಎಂಬುವವರ ಪ್ರಕರಣದಲ್ಲಿ ಹೈಕೋರ್ಟ್‌ನ ಸತತ ಸೂಚನೆಗಳ (2025ರ ಡಿಸೆಂಬರ್ 8 ಹಾಗೂ 2026ರ ಜನವರಿ 5) ಹೊರತಾಗಿಯೂ ಅಫಿಡವಿಟ್ ಸಲ್ಲಿಸದ ಕಾರಣಕ್ಕಾಗಿ, 2026ರ ಜುಲೈ 1ರಂದು ನ್ಯಾಯಮೂರ್ತಿ ಸೌರಭ್ ಶ್ಯಾಮ್ ಶಂಶೇರಿ ಅವರ ಪೀಠವು ಮೇಧಾ ರೂಪಂ ವಿರುದ್ಧ ಜಾಮೀನು ಸಹಿತ ವಾರಂಟ್ ಹೊರಡಿಸಿತ್ತು. ಇದರ ಜೊತೆಗೆ, ಕೇವಲ ಒಂದೇ ವರ್ಷದ ಅವಧಿಯಲ್ಲಿ ಇವರ ವಿರುದ್ಧ ಹತ್ತಕ್ಕೂ ಹೆಚ್ಚು ನ್ಯಾಯಾಂಗ ನಿಂದನೆ ( ) ಅರ್ಜಿಗಳು ಸಲ್ಲಿಕೆಯಾಗಿರುವುದು ಕಾನೂನಿನ ಆಡಳಿತದ ( ) ಮೇಲಿನ ಇವರ ತಾತ್ಸಾರವನ್ನು ಎತ್ತಿತೋರಿಸುತ್ತದೆ.

2026ರ ಏಪ್ರಿಲ್ ಕಾರ್ಮಿಕರ ಪ್ರತಿಭಟನೆಯ ಬೆನ್ನಲ್ಲೇ, ಔಟ್‌ಸೋರ್ಸಿಂಗ್ ಏಜೆನ್ಸಿ ಗಳ ಕಾರ್ಮಿಕರು ಪ್ರತಿಭಟನೆಗೆ ಇಳಿದರೆ ಆಯಾ ಏಜೆನ್ಸಿ ಗಳ ಪರವಾನಗಿಯನ್ನೇ ರದ್ದುಪಡಿಸಿ ಕಪ್ಪುಪಟ್ಟಿಗೆ ಸೇರಿಸುವುದಾಗಿ ಜಿಲ್ಲಾಧಿಕಾರಿಯು ಬೆದರಿಕೆ ಹಾಕಿದ್ದರು. ಶಾಂತಿಯುತವಾಗಿ ಪ್ರತಿಭಟಿಸುವುದು ಒಂದು ಪ್ರಜಾಸತ್ತಾತ್ಮಕ ಹಕ್ಕಾಗಿರುವಾಗ, ಪ್ರತಿಭಟನೆ ನಡೆದರೆ ಸಂಸ್ಥೆಯನ್ನೇ ಮುಚ್ಚಿಸುವ ಇಂತಹ ಆದೇಶಗಳು ಸಂವಿಧಾನದ ಆಶಯಗಳಿಗೆ ಸಂಪೂರ್ಣ ವಿರುದ್ಧವಾಗಿವೆ.

ಸುಳ್ಳು ಪೊಲೀಸ್ ದಾಖಲೆಗಳ ಸೃಷ್ಟಿಗೆ ಕುಮ್ಮಕ್ಕು ನೀಡುವುದು, ಭಿನ್ನಮತವನ್ನು ಹತ್ತಿಕ್ಕಲು ರಾಷ್ಟ್ರೀಯ ಭದ್ರತಾ ಕಾಯ್ದೆಯನ್ನು ರಾಜಕೀಯ ಅಸ್ತ್ರವಾಗಿ ಬಳಸುವುದು ಮತ್ತು ನ್ಯಾಯಾಲಯದ ಆದೇಶಗಳನ್ನು ಕಡೆಗಣಿಸುವುದು ಮೇಧಾ ರೂಪಂ ಅವರ ಆಡಳಿತದ ಕಾರ್ಯವಿಧಾನವಾಗಿ ಬದಲಾಗಿದೆ. ಉನ್ನತ ಸಾಂವಿಧಾನಿಕ ಹುದ್ದೆಯಲ್ಲಿರುವ ಗ್ಯಾನೇಶ್ ಕುಮಾರ್ ಅವರ ಪುತ್ರಿಯ ಈ ಸರ್ವಾಧಿಕಾರಿ ನಡೆಗಳು, ಪ್ರಜಾಪ್ರಭುತ್ವ ವ್ಯವಸ್ಥೆಯು ಹೇಗೆ ಸಂವಿಧಾನದ ಮೂಲ ಆಶಯಗಳಿಂದ ವಿಮುಖವಾಗುತ್ತಿದೆ ಎಂಬುದರ ಅಪಾಯಕಾರಿ ಮುನ್ಸೂಚನೆಯಾಗಿದೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR